ಸಂಪುಟ : 9 ಸಂಚಿಕೆ 187 ಪುಟ : 4 ಬೆಲೆ: 3.00 ಶನಿವಾರ ಆಗಸ್ಟ್ 31 2024 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 9 Issue : 187 Pages : 4 Price : 3.00 Saturday August 31 2024 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

## ವಿಶ್ವಹಿಂದೂ ಪರಿಷತ್ತಿನಿಂದ ಸಾಮೂಹಿಕ ಶ್ರೀ ಸತ್ಯನಾರಾಯಣ ಪೂಜೆ ನಾಳೆ

■ವಿಜಯಸಾಕ್ಷಿ ಸುದ್ದಿ, ಗದಗ

ವಿಶ್ವ ಹಿಂದೂ ಪರಿಷತ್ತಿನ 60ನೇ ವರ್ಷದ ಸಂಸ್ಥಾಪನಾ ಕಾರ್ಯಕ್ರಮದ ನಿಮಿತ್ತ ಪರಿಷತ್ತಿನ ವತಿಯಿಂದ ನಗರದ ಶ್ರೀ ವಿಠಲಾರೂಢ ಕಲ್ಯಾಣ ಮಂಟಪ ಮುಳಗುಂದ ನಾಕಾ (ಹುಬ್ಬಳ್ಳಿ ರಸ್ತೆ) ಇಲ್ಲಿ ಸೆಪ್ಟೆಂಬರ್ 1ರಂದು ಬೆಳಿಗ್ಗೆ 10 ಗಂಟೆಗೆ ಸಾಮೂಹಿಕ ಶ್ರೀ ಸತ್ಯನಾರಾಯಣ ಪೂಜೆ ಹಾಗೂ ಧಾರ್ಮಿಕ ಸಭೆಯನ್ನು ಆಯೋಜಿಸಲಾಗಿದೆ.

ಧಾರ್ಮಿಕ ಸಭೆಯು ಪೂಜ್ಯ ಅಭಿನವ ಬೂದೀಶ್ವರ ಮಹಾಸ್ವಾಮಿಗಳು ಹೊಸಳ್ಳಿ ಇವರ ಸಾನ್ನಿಧ್ಯದಲ್ಲಿ ಜರುಗುವುದು. ಅಧ್ಯಕ್ಷತೆಯನ್ನು ಗಣ್ಯ ವ್ಯಾಪಾರಸ್ಥರಾದ ಅಶೋಕ ಹಂಜಗಿ ವಹಿಸುವರು. ಮುಖ್ಯ ವಕ್ತಾರರಾಗಿ ಕ್ಷೇತ್ರಿಯ ಧಾರ್ಮಿಕ ಪ್ರಮುಖರಾದ ಬಸವರಾಜ ಜಿ. ಹಾಗೂ ಮಾರ್ಗದರ್ಶಕರಾಗಿ ಶಿವಾನಂದ ಪಾಟೀಲ ಪಾಲ್ಗೊಳ್ಳುವರು.

ಈ ಧಾರ್ಮಿಕ ಕಾರ್ಯಕ್ರಮದಲ್ಲಿ ದೇಶಭಕ್ತ ಧರ್ಮಾಭಿಮಾನಿ ಬಂಧುಗಳು ಭಾಗವಹಿಸಬೇಕೆಂದು ಕಾರ್ಯಕ್ರಮದ ಸಂಚಾಲಕಿ ರಾಣಿ ಚಂದಾವರಿ ಪತ್ರಿಕಾ ಪ್ರಕಟಣೆಯ ಮೂಲಕ ವಿನಂತಿಸಿದ್ದಾರೆ.

### ಸಚಿವ ಎಚ್.ಕೆ. ಪಾಟೀಲ ಸಂತಾಪ

## ಕೆ.ಹೆಚ್. ಶ್ರೀನಿವಾಸ್ ನಿಧನ ಆಘಾತಕಾರಿ

■ವಿಜಯಸಾಕ್ಷಿ ಸುದ್ದಿ, ಗದಗ



ಕರ್ನಾಟಕದ ರಾಜಕಾರಣಿ, ಉತ್ತಮ ಸಂಸದೀಯ ಪಟು ಕೆ.ಹೆಚ್. ಶ್ರೀನಿವಾಸ್ ಇವರು ನಿಧನರಾದ ಸುದ್ದಿ ಆಘಾತಕಾರಿಯಾದುದು. ಇವರು ನಮ್ಮ ತಂದೆ ಕೆ.ಎಚ್. ಪಾಟೀಲ್ ಅವರಿಗೆ ಆತ್ಮೀಯರಾಗಿದ್ದರು. ಅಲ್ಲದೆ ನನ್ನ ರಾಜಕೀಯ ಜೀವನದ ಆರಂಭದ ಮಾರ್ಗದರ್ಶಕರು. ದೇವರಾಜ್ ಅರಸು ಅವರಿಗೆ ರಾಜಕೀಯ ಕಾರ್ಯದರ್ಶಿ ಆಗಿದ್ದರಲ್ಲದೆ, ಅವರ ಸಂಪುಟದಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ಇಂಧನ ಇಲಾಖೆಯ ಸಚಿವರಾಗಿ ಕಾರ್ಯನಿರ್ವಹಿಸಿ ಉತ್ತಮ ಸಂಸದೀಯ ಪಟುವಾಗಿ ಹೊರಹೊಮ್ಮಿದವರು ಎಂದು ಸಚಿವ ಎಚ್.ಕೆ. ಪಾಟೀಲ ಸಂತಾಪ ವ್ಯಕ್ತಪಡಿಸಿದ್ದಾರೆ.

ಇಂದಿರಾಗಾಂಧಿ, ರಾಜೀವ್ ಗಾಂಧಿ ಹಾಗೂ ಸೋನಿಯಾ ಗಾಂಧಿ ಅವರ ಭಾಷಣಗಳ ಕನ್ನಡ ಭಾಷಾಂತರಕಾರರಾಗಿ, ಕನ್ನಡದಲ್ಲಿ ಕವನ ಮತ್ತು ನಾಟಕಗಳನ್ನು ರಚಿಸಿರುವ ಇವರು ಎಸ್.ಎಂ. ಕೃಷ್ಣ ಅವರ ಅವಧಿಯಲ್ಲಿ ವಿಧಾನ ಪರಿಷತ್ತಿನ ವಿರೋಧ ಪಕ್ಷದ ನಾಯಕನಾಗಿದ್ದರು. ಕಾಂಗ್ರೆಸ್, ಜೆಡಿಎಸ್ ಹಾಗೂ ಇತರ ಪಕ್ಷಗಳ ಸದಸ್ಯರಾಗಿ ಕಾರ್ಯ ನಿರ್ವಹಿಸಿದ ಇವರ ಸಂಸದೀಯ ಸೇವಾ ಅವಧಿ ಆದರ್ಶನೀಯವಾದುದು. ಇವರ ಅಗಲಿಕೆ ನಮಗೆಲ್ಲ ನೋವು ತಂದಿದ್ದು, ಭಗವಂತನು ಅವರ ಕುಟುಂಬ ವರ್ಗಕ್ಕೆ ದುಃಖ ಭರಿಸುವ ಶಕ್ತಿ ನೀಡಲಿ ಎಂದು ಪ್ರಾರ್ಥಿಸಿದ್ದಾರೆ.

## ಕೃಷಿಭಾಗ್ಯ ಯೋಜನೆಯಡಿ ಅರ್ಜಿ ಆಹ್ವಾನ

■ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ

2024–25ನೇ ಸಾಲಿನಲ್ಲಿ ಶಿರಹಟ್ಟಿ ತಾಲೂಕಿನಲ್ಲಿ ಕೃಷಿ ಭಾಗ್ಯ ಯೋಜನೆಯನ್ನು ಮಳೆಯಾಶ್ರಿತ ಕೃಷಿ ನೀತಿ–2014ರನ್ವಯ ಪ್ಯಾಕೇಜ್ ಮಾದರಿಯಲ್ಲಿ ಅನುಷ್ಠಾನಗೊಳಿಸಲು ಸರ್ಕಾರ ಆದೇಶ ಹೊರಡಿಸಿದೆ.

ಕೃಷಿ ಭಾಗ್ಯ ಯೋಜನೆಯ ಎಲ್ಲಾ ಘಟಕಗಳನ್ನು (ಕ್ಷೇತ್ರಬದು, ಕೃಷಿ ಹೊಂಡ, ಪಾಲಿಥಿನ್ ಹೊದಿಕೆ (ಕೆಂಪು ಮಣ್ಣಿನಲ್ಲಿ ಮಾತ್ರ), ಡಿಜೇಲ್/ಪೆಟ್ರೋಲ್/ಸೋಲಾರ್ ಪಂಪಸೆಟ್, ತಂತಿಬೇಲಿ, ನೆರಳು ಪರದೆ ಹಾಗೂ ಸೂಕ್ಷ್ಮ ನೀರಾವರಿ ಘಟಕ) ರೈತರು ಅನುಷ್ಠಾನಗೊಳಿಸುವುದು ಕಡ್ಡಾಯವಾಗಿದೆ. ಈ ಹಿಂದೆ ಕೃಷಿ ಇಲಾಖೆ ಅಥವಾ ಇತರೆ ಇಲಾಖೆಯಿಂದ ಯಾವುದೇ ಯೋಜನೆಯಡಿ ಕೃಷಿಹೊಂಡದ ಫಲಾನುಭವಿಯಾಗಿದ್ದಲ್ಲಿ ಅಂತಹ ರೈತರು ಈ ಯೋಜನೆಯಡಿ ಅರ್ಹರಾಗಿರುವುದಿಲ್ಲ.

ನಿಗದಿತ ಗುರಿಗಿಂತ ಹೆಚ್ಚಿನ ಅರ್ಜಿಗಳು ಬಂದಲ್ಲಿ ಲಾಟರಿ ಮೂಲಕ ಆಯ್ಕೆ ಮಾಡಲಾಗುವುದು. ನಿಗದಿಗಿಂತ ಒಳಗೆ ಅರ್ಜಿ ಬಂದರೆ ಮೊದಲ ಬಂದವರಿಗೆ ಮೊದಲ ಆದ್ಯತೆ ನೀಡಲಾಗುವುದು. ಆಸಕ್ತಿಯುಳ್ಳ ರೈತರು ಸಂಬಂಧಿಸಿದ ರೈತ ಸಂಪರ್ಕ ಕೇಂದ್ರಗಳಲ್ಲಿ ಅರ್ಜಿಗಳನ್ನು (ಪಹಣಿ, ಆಧಾರ್ ಕಾರ್ಡ್, ಬ್ಯಾಂಕ್ ಪುಸ್ತಕದ ಝರಾಕ್ಸ ಪ್ರತಿ ಲಗತ್ತಿಸಿ) ಸೆ.15ರೊಳಗಾಗಿ ಸಲ್ಲಿಸಬಹುದಾಗಿದೆ ಎಂದು ಶಿರಹಟ್ಟಿ ತಾಲೂಕಾ ಸಹಾಯಕ ಕೃಷಿ ನಿರ್ದೇಶಕ ರೇವಣೆಪ್ಪ ಮನಗೂಳಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.



ಗದುಗಿನ ಜ.ಪಂಚಾಚಾರ್ಯ ಮಾಂಗಲ್ಯ ಮಂದಿರದಲ್ಲಿ ಜರುಗಿದ ಮಠಾಧೀಶರ ಸಭೆಯಲ್ಲಿ ಅ.ಭಾ.ವೀ. ಮಹಾಸಭಾದ ಗದಗ ಜಿಲ್ಲಾ ನೂತನ ಅಧ್ಯಕ್ಷ ಶರಣಬಸಪ್ಪ ಗುಡಿಮನಿ ಅವರನ್ನು ಸನ್ಮಾನಿಸಿ ಗೌರವಿಸಲಾಯಿತು.

ಸಿದ್ಧರಬೆಟ್ಟ–ಅಬ್ಬಿಗೇರಿಯ ಪೂಜ್ಯ ಷ.ಬ್ರ.ವೀರಭದ್ರ ಶಿವಾಚಾರ್ಯ ಸ್ವಾಮಿಗಳು ಸೇರಿದಂತೆ ನರೇಗಲ್ಲ, ಅಡ್ನೂರ, ಬನ್ನಿಕೊಪ್ಪ, ತುಪ್ಪದಕುರಹಟ್ಟಿ, ನರಗುಂದ, ಹಿರೇವಡ್ಡಟ್ಟಿಯ ಸ್ವಾಮಿಗಳು ಇದ್ದರು.

### 'ಗದಗ ಉತ್ಸವ 'ಉದ್ಘಾಟನಾ ಸಮಾರಂಭದಲ್ಲಿ ಶಾಸಕ ಸಿ.ಸಿ. ಪಾಟೀಲ ಕರೆ

# ಔದ್ಯೋಗಿಕ ಕ್ರಾಂತಿಗೆ ಪ್ರಯತ್ನಿಸೋಣ

■ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಪರಿಸರದಲ್ಲಿ ಬೃಹತ್ ಕೈಗಾರಿಕೆಗಳ ಸ್ಥಾಪನೆಗೆ ಜಿಲ್ಲಾ ವಾಣಿಜ್ಯೋದ್ಯಮ ಸಂಸ್ಥೆಯ ಪದಾಧಿಕಾರಿಗಳು ಜೊತೆಗೂಡಿ ಸಂಸದ ಬಸವರಾಜ ಬೊಮ್ಮಾಯಿ ಅವರನ್ನು ಒತ್ತಾಯಿಸುವ ಮೂಲಕ ಈ ಭಾಗದಲ್ಲಿ ಔದ್ಯೋಗಿಕ ಕ್ರಾಂತಿಗೆ ನಾವೆಲ್ಲರೂ ಪ್ರಯತ್ನಿಸೋಣ ಎಂದು ನರಗುಂದ ಶಾಸಕ ಸಿ.ಸಿ. ಪಾಟೀಲ ಕರೆ ನೀಡಿದರು.

ಇಲ್ಲಿನ ತೋಂಟದಾರ್ಯ ಕಲ್ಯಾಣ ಮಂಟಪದಲ್ಲಿ ಶುಕ್ರವಾರ ಗದಗ ಜಿಲ್ಲಾ ವಾಣಿಜ್ಯೋದ್ಯಮ ಸಂಸ್ಥೆ, ಕೈಗಾರಿಕೆ ಮತ್ತು ವಾಣಿಜ್ಯ ಇಲಾಖೆ, ಗ್ರಾಮೀಣ ಮತ್ತು ಸಣ್ಣ ಉದ್ಯಮ ವಿಭಾಗ, ಜಿಲ್ಲಾ ಪಂಚಾಯಿತಿ ಆಶ್ರಯದಲ್ಲಿ ನಡೆದ ಗದಗ ಉತ್ಸವ–2024, ಕೈಗಾರಿಕಾ ವಸ್ತು ಪ್ರದರ್ಶನ ಹಾಗೂ ಮಾರಾಟ ಮೇಳ ಉದ್ಘಾಟಿಸಿ ಮಾತನಾಡಿದರು.







ಕೈಗಾರಿಕೆಗಳ ಸ್ಥಾಪನೆ ಸಂಬಂಧ ಸಂಸದ ಬಸವರಾಜ ಬೊಮ್ಮಾಯಿ ಅವರ ಜೊತೆ ಪ್ರತ್ಯೇಕ ಸಭೆ ನಡೆಸಿ, ಈ ಭಾಗದಲ್ಲಿ ಯಾವ ರೀತಿಯ ಕೈಗಾರಿಕೆ ಸ್ಥಾಪನೆ ಮಾಡಿದರೆ ಹೆಚ್ಚು ಅನುಕೂಲ ಎಂಬ ಕುರಿತು ಸಮೀಕ್ಷೆ ನಡೆಸಿ, ಅದರ ವರದಿಯನ್ನು ಕೊಟ್ಟು ಒತ್ತಾಯಿಸುವ ಕೆಲಸ ಮಾಡೋಣ ಎಂದರು.

ಸರಕಾರಿ ಉದ್ಯೋಗ ಇಂದಿನ ಕಾಲದಲ್ಲಿ ಗಗನ ಕುಸುಮವಾಗಿದೆ. ಹೀಗಾಗಿ ಯುವಕರು ಉದ್ಯಮಿಯಾಗಿ ಬೆಳೆದು ಇತರರಿಗೂ ಉದ್ಯೋಗ ಕೊಡುವ ಕೆಲಸ ಮಾಡಬೇಕು. ಸರಕಾರ ಮತ್ತು ಅಧಿಕಾರಿ ವರ್ಗ ಉದ್ಯಮಿಗಳ ಬೇಡಿಕೆಗಳಿಗೆ ಸ್ಪಂದಿಸಿ, ಏಕ ಗವಾಕ್ಷಿ ಪದ್ಧತಿಯ ಮೂಲಕ ಉದ್ಯಮಿಗಳಿಗೆ ಬೇಕಾದ ಪರವಾನಗಿ, ಸೌಲಭ್ಯಗಳನ್ನು ಒದಗಿಸಿದಾಗ ಮಾತ್ರ ದೇಶದಲ್ಲಿ ಔದ್ಯೋಗಿಕ ಕ್ರಾಂತಿಯಾಗಲು ಸಾಧ್ಯ ಎಂದರು.

ಶಿರಹಟ್ಟಿ ಶಾಸಕ ಡಾ. ಚಂದ್ರು ಲಮಾಣಿ ಮಾತನಾಡಿ, ಒಂದು ಜಿಲ್ಲೆ ಅಭಿವೃದ್ಧಿ ಆಗಬೇಕಾದರೆ ಅಲ್ಲಿ ಕೈಗಾರಿಕೆಗಳು ಇರಬೇಕು. ಕೈಗಾರಿಕೆಗಳಿಂದ ಉದ್ಯೋಗ ಸೃಷ್ಟಿಯಾಗಿ ಸ್ಥಳೀಯವಾಗಿ ಉದ್ಯೋಗ ಕಲ್ಪಿಸಲು ಸಾಧ್ಯವಾಗುತ್ತದೆ. ಮುಖ್ಯವಾಗಿ ಗುಡಿ ಕೈಗಾರಿಕೆಗಳಿಗೆ, ನೇಕಾರಿಕೆಗೆ ಇನ್ನಷ್ಟು ಪ್ರೋತ್ಸಾಹ ನೀಡುವ ಕೆಲಸವಾಗಬೇಕು ಎಂದರು.

ಪ್ರಾಸ್ತಾವಿಕವಾಗಿ ಮಾತನಾಡಿದ ಉತ್ಸವ ಸಮಿತಿ ಚೇರಮನ್ ಚಂದ್ರು ಬಾಳಿಹಳ್ಳಿಮಠ, ಸಣ್ಣ ಕೈಗಾರಿಕೋದ್ಯಮಿಗಳು ಉತ್ಪಾದನೆ ಮಾಡಿದ ವಸ್ತುಗಳನ್ನು ಒಂದೇ ಸೂರಿನಡಿ ಪ್ರದರ್ಶಿಸಿ, ಮಾರಾಟ ಮಾಡಲು ವೇದಿಕೆ ಕಲ್ಪಿಸುವ ಉದ್ದೇಶದಿಂದ ಕಳೆದ 24 ವರ್ಷಗಳಿಂದ ಗದಗ ಉತ್ಸವ ಆಯೋಜಿಸಲಾಗುತ್ತಿದೆ ಎಂದರು.

ಇದೇ ಸಂದರ್ಭದಲ್ಲಿ ಡಾ. ತೇಜ ಚನ್ನಯ್ಯ ಹಿರೇಮಠ ಅವರನ್ನು ಸನ್ಮಾನಿಸಲಾಯಿತು. ಜ. ತೋಂಟದ ಸಿದ್ಧರಾಮ ಸ್ವಾಮೀಜಿ ಕಾರ್ಯಕ್ರಮದ ಸಾನ್ನಿಧ್ಯ ವಹಿಸಿದ್ದರು. ಪ್ರಮುಖರಾದ ತಾತನಗೌಡ ಪಾಟೀಲ, ಹರೀಶಕುಮಾರ ಶಾ, ಸದಾಶಿವಯ್ಯ ಮದರಿಮಠ, ಅಶೋಕಗೌಡ ಪಾಟೀಲ, ಸಿ.ಎಸ್. ಯೋಗೇಶ, ಬಸವರಾಜ ಅಂಗಡಿ, ಶಿವಪುತ್ರಪ್ಪ ಹರಿಜನ, ಸುವರ್ಣಾ ಮದರಿಮಠ, ಜ್ಯೋತಿ ದಾನಪ್ಪಗೌಡ್ರ ಇತರರು ಪಾಲ್ಗೊಂಡಿದ್ದರು.

### ನಿಗದಿತ ಮೀಸಲಾತಿ ಪ್ರಶ್ನಿಸಿ ಹೈಕೋರ್ಟ್ ಮೆಟ್ಟಿಲೇರಿದ ನಗರಸಭೆ ಸದಸ್ಯರು

# ಅಧ್ಯಕ್ಷ, ಉಪಾಧ್ಯಕ್ಷ ಆಯ್ಕೆಗೆ ತಡೆಯಾಜ್ಞೆ

■ವಿಜಯಸಾಕ್ಷಿ ಸುದ್ದಿ, ಗದಗ

ಗದಗ–ಬೆಟಗೇರಿ ನಗರಸಭೆ 2ನೇ ಅವಧಿಯ ಅಧ್ಯಕ್ಷ, ಉಪಾಧ್ಯಕ್ಷರ ಆಯ್ಕೆಗೆ ನಿಗದಿಯಾದ ಮೀಸಲಾತಿ ಪ್ರಶ್ನಿಸಿ 1ನೆ ವಾರ್ಡಿನ ಕಾಂಗ್ರೆಸ್ ಸದಸ್ಯೆ ಲಕ್ಷ್ಮೀ ಅನಿಲಕುಮಾರ ಸಿದ್ದಮ್ಮನಹಳ್ಳಿ ಹಾಗೂ 10ನೇ ವಾರ್ಡಿನ ಕಾಂಗ್ರೆಸ್ ಸದಸ್ಯ ಇಮ್ತಿಯಾಜ್ ಶಿರಹಟ್ಟಿ ಹೈಕೋರ್ಟ್ ಮೆಟ್ಟಿಲೇರಿದ್ದು, ಅರ್ಜಿದಾರರ ಮನವಿ ಪುರಸ್ಕರಿಸಿದ ಧಾರವಾಡ ಹೈಕೋರ್ಟ್ ಪೀಠ, ಮುಂದಿನ ವಿಚಾರಣೆವರೆಗೂ ಅಧ್ಯಕ್ಷ, ಉಪಾಧ್ಯಕ್ಷರ ಆಯ್ಕೆ ಪ್ರಕ್ರಿಯೆ ನಡೆಸದಂತೆ ತಡೆಯಾಜ್ಞೆ ನೀಡಿದೆ.

ವಕಾರಸಾಲು ಲೀಸ್ ವಿಸ್ತರಣೆ ವಿಚಾರವಾಗಿ ಪ್ರಭಾರಿ ಪೌರಾಯುಕ್ತರ ದಾಖಲಿಸಿದ್ದ ಪ್ರಕರಣಕ್ಕೆ ತಡೆಯಾಜ್ಞೆ, ಮೂವರು ಬಿಜೆಪಿ ಸದಸ್ಯರಿಗೆ ಜಾಮೀನು ಸಹ ಮಂಜೂರಾದ ಹಿನ್ನೆಲೆಯಲ್ಲಿ ಅಧ್ಯಕ್ಷ ಸ್ಥಾನದ ಆಕಾಂಕ್ಷಿಗಳಲ್ಲಿ ನಿರೀಕ್ಷೆ ಹೆಚ್ಚಿತ್ತು. ಆದರೆ ಗುರುವಾರ ಹೈಕೋರ್ಟ್ ನೀಡಿರುವ ತಡೆಯಾಜ್ಞೆಯಿಂದ ಆಡಳಿತ ಪಕ್ಷ ಬಿಜೆಪಿ ಸದಸ್ಯರ ಲೆಕ್ಕಾಚಾರ ತಲೆಕೆಳಗಾದಂತಾಗಿದೆ. ಒಟ್ಟಾರೆ ನಗರಸಭೆ ಹಲವಾರು ವಿಷಯಗಳು ಹೈಕೋರ್ಟ್ ಅಂಗಳದಲ್ಲಿಯೇ ಇತ್ಯರ್ಥವಾಗುತ್ತಿರುವುದು ಚರ್ಚೆಗೆ ಕಾರಣವಾಗಿದೆ.





ವಕಾರಸಾಲು ಲೀಸ್ ಅವಧಿ ವಿಸ್ತರಣೆ ಠರಾವು ವಿಷಯವಾಗಿ ಪ್ರಭಾರ ಪೌರಾಯುಕ್ತರು ದಾಖಲಿಸಿದ್ದ ಪ್ರಕರಣಕ್ಕೆ ಧಾರವಾಡ ಹೈಕೋರ್ಟ್ ಪೀಠ ತಡೆಯಾಜ್ಞೆ ನೀಡಿತ್ತು. ಇದೀಗ, ಗದಗ–ಬೆಟಗೇರಿ ನಗರಸಭೆ ಅಧ್ಯಕ್ಷ, ಉಪಾಧ್ಯಕ್ಷರ ಆಯ್ಕೆಗೂ ತಡೆಯಾಜ್ಞೆ ಎದುರಾಗಿದೆ.

ಸದ್ಯ ನಗರಸಭೆ 2ನೇ ಅವಧಿಯ ಮೀಸಲಾತಿಯನ್ವಯ ಅಧ್ಯಕ್ಷ ಸ್ಥಾನ ಸಾಮಾನ್ಯ ಮತ್ತು ಉಪಾಧ್ಯಕ್ಷ ಸ್ಥಾನ ಸಾಮಾನ್ಯ (ಮಹಿಳೆ) ವರ್ಗಕ್ಕೆ ಮೀಸಲಾಗಿದೆ.

ಗದಗ–ಬೆಟಗೇರಿ ನಗರಸಭೆ ಅಧ್ಯಕ್ಷ ಸ್ಥಾನ ಸಾಮಾನ್ಯ ಮಹಿಳೆಗೆ, ಉಪಾಧ್ಯಕ್ಷ ಸ್ಥಾನ 2ಎ ವರ್ಗಕ್ಕೆ ನಿಗದಿ ಮಾಡಬೇಕು. ಈ ರೋಸ್ಟರ್‌ಗಳು ಬಹಳ ವರ್ಷಗಳಿಂದ ಬಂದಿಲ್ಲ ಎಂದು ನಾವು ನ್ಯಾಯಾಲಯದಲ್ಲಿ ಮನವಿ ಮಾಡಿದ್ದೇವೆ. ಇದನ್ನು ಪರಿಗಣಿಸಿರುವ ನ್ಯಾಯಾಲಯ ಸದ್ಯ ತಡೆಯಾಜ್ಞೆ ನೀಡಿದೆ.

– ಲಕ್ಷ್ಮೀ ಸಿದ್ದಮ್ಮನಹಳ್ಳಿ.
ವಾರ್ಡ್ ನಂ.1ರ ಕಾಂಗ್ರೆಸ್ ಸದಸ್ಯೆ.

ಈ ಮೀಸಲಾತಿ ಘೋಷಣೆಯಲ್ಲಿ ರೋಸ್ಟರ್ ಪಾಲನೆಯಾಗಿಲ್ಲ. 2016ರಿಂದ ಈವರೆಗೆ ಅಧ್ಯಕ್ಷ, ಉಪಾಧ್ಯಕ್ಷ ಸ್ಥಾನದ ಮೀಸಲಾತಿಯಲ್ಲಿ ಸಾಮಾನ್ಯ ವರ್ಗಕ್ಕೆ ಹೆಚ್ಚಿನ ಅವಕಾಶ ಒದಗಿಬಂದಿದೆ. ಹೀಗಾಗಿ ರೋಸ್ಟರ್ ಪ್ರಕಾರ ಅಧ್ಯಕ್ಷ ಸ್ಥಾನ ಸಾಮಾನ್ಯ ಮಹಿಳೆ ಮತ್ತು ಉಪಾಧ್ಯಕ್ಷ ಸ್ಥಾನ 2ಎ ವರ್ಗಕ್ಕೆ ಘೋಷಣೆಯಾಗಬೇಕು ಎನ್ನುವುದು ಅರ್ಜಿದಾರರ ವಾದವಾಗಿದೆ. ಈ ಬಗ್ಗೆ ಆಗಸ್ಟ್ 29ರಂದು ವಿಚಾರಣೆ ನಡೆಸಿದ ಹೈಕೋರ್ಟ್ ಸೆಪ್ಟೆಂಬರ್ 11ಕ್ಕೆ ವಿಚಾರಣೆ ಮುಂದೂಡಿದ್ದು, ಅಲ್ಲಿಯವರೆಗೆ ಆಯ್ಕೆ ಪ್ರಕ್ರಿಯೆಗೆ ತಡೆಯಾಜ್ಞೆ ನೀಡಿದೆ.

### ಡಂಬಳ ಮಂಡಳದ ಬಿಜೆಪಿ ಸದಸ್ಯತ್ವ ಅಭಿಯಾನದಲ್ಲಿ ಕಳಕಪ್ಪ ಬಂಡಿ ಕರೆ

# ಅತ್ಯಧಿಕ ಸದಸ್ಯತ್ವಕ್ಕೆ ಶ್ರಮಿಸಿ

■ವಿಜಯಸಾಕ್ಷಿ ಸುದ್ದಿ, ಡಂಬಳ

ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದು ಒಂದೂವರೆ ವರ್ಷ ಕಳೆದರೂ ಅಭಿವೃದ್ಧಿ ಕಾರ್ಯಗಳು ಸಂಪೂರ್ಣ ಕುಂಠಿತಗೊಂಡಿದ್ದು, ರಾಜ್ಯದಲ್ಲಿ ಕಾಂಗ್ರೆಸ್ ಸರ್ಕಾರ ಅತಂತ್ರ ಸ್ಥಿತಿಯಲ್ಲಿದೆ. ವಾಲ್ಮೀಕಿ ಹಗರಣದಂತಹ ಭ್ರಷ್ಟಾಚಾರದಲ್ಲಿ ಮುಳಗಿದೆ ಎಂದು ಮಾಜಿ ಶಾಸಕ ಕಳಕಪ್ಪ ಬಂಡಿ ಆರೋಪಿಸಿದರು.

ಡಂಬಳ ಗ್ರಾಮದ ಜಗದ್ಗುರು ತೋಂಟದಾರ್ಯ ಕಲಾಭವನದಲ್ಲಿ ಭಾರತಿಯ ಜನತಾ ಪಕ್ಷದಿಂದ ಗದಗ ಜಿಲ್ಲಾ ಡಂಬಳ ಮಂಡಳದ ಸದಸ್ಯತ್ವ ಅಭಿಯಾನದ ಕರಪತ್ರಗಳನ್ನು ಬಿಡುಗಡೆಗೊಳಿಸಿ ಮಾತನಾಡಿದ ಅವರು, ದೀನದಯಾಳ ಶರ್ಮಾ, ಶ್ಯಾಮ ಪ್ರಸಾದ ಅವರ ದೂರದೃಷ್ಟಿಯಡಿ ಒಂದು ಹಿಂದೂಗಳ ಪಕ್ಷ ಕಟ್ಟಬೇಕು ಎಂಬ ಅವರ ಶ್ರಮದ ಪ್ರತೀಕವಾಗಿ ಪ್ರಧಾನಿ ನರೇಂದ್ರ ಮೋದಿಯವರ ಅಭಿವೃದ್ಧಿ ಕೆಲಸಗಳಿಂದಾಗಿ ಬಿಜೆಪಿ ವಿಶ್ವದಲ್ಲಿಯೇ ಅತಿ ಹೆಚ್ಚು ಕಾರ್ಯಕರ್ತರನ್ನು ಹೊಂದಿದ ಪಕ್ಷವಾಗಿ ಹೊರಹೊಮ್ಮಲು ಸಾಧ್ಯವಾಗಿದೆ ಎಂದು ಹೇಳಿದರು.





ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಡಂಬಳ ಬಿಜೆಪಿ ಮಂಡಲದ ಅಧ್ಯಕ್ಷ ರವಿ ಕರಿಗಾರ ಮಾತನಾಡಿ, ವಿಶ್ವವೇ ಮೆಚ್ಚುವ ನಮ್ಮ ಹೆಮ್ಮಯ ಪ್ರಧಾನಿ ನರೇಂದ್ರ ಮೋದಿಯವರ ಕೈ ಬಲಪಡಿಸಲು ಮತ್ತು ಬಿಜೆಪಿ ಪಕ್ಷಕ್ಕೆ ಶಕ್ತಿ ತುಂಬಲು ನಾವೆಲ್ಲರೂ ಜತೆಗೂಡಿ ಶ್ರಮವಹಿಸಿ ಸದಸ್ಯತ್ವ ಅಭಿಯಾನ ಯಶ್ವಸಿಗೊಳಿಸಬೇಕು ಎಂದು ಹೇಳಿದರು.

ಸದಸ್ಯತ್ವ ಅಭಿಯಾನಕ್ಕೆ ಸೆ.1ರಂದು ದೆಹಲಿಯಲ್ಲಿ ಪ್ರಧಾನಿ ನರೇಂದ್ರ ಮೋದಿ ಚಾಲನೆ ನೀಡಲಿದ್ದಾರೆ. ಸೆ.2ರಿಂದ 15ದಿನಗಳ ಕಾಲ ಸದಸ್ಯತ್ವ ಅಭಿಯಾನ ಜರುಗಲಿದೆ. ಕಳೆದ ಬಾರಿಯಂತೆಯೇ ಜಿಲ್ಲೆಯಲ್ಲಿ ಅತ್ಯಧಿಕ ಸದಸ್ಯತ್ವ ಮಾಡುವ ನಿಟ್ಟಿನಲ್ಲಿ ಜಿಲ್ಲೆಯ ಎಲ್ಲಾ ಮಂಡಲ ಹಾಗೂ ಎಲ್ಲ ಮೋರ್ಚಾಗಳ ಕಾರ್ಯ ಯೋಜನೆ ಹಾಕಿಕೊಳ್ಳಬೇಕು. ಜಿಲ್ಲೆಯಲ್ಲಿ ರಾಜ್ಯದಲ್ಲೇ ಅತಿ ಹೆಚ್ಚು ಸದಸ್ಯತ್ವ ಮಾಡಬೇಕು ಎಂದು ಕರೆ ನೀಡಿದರು.

ಜಿಲ್ಲಾ ಬಿಜೆಪಿ ಪ್ರಧಾನ ಕಾರ್ಯದರ್ಶಿ ಲಿಂಗರಾಜ ಪಾಟೀಲ ಮಾತನಾಡಿ, ಪಕ್ಷ ಗಟ್ಟಿಯಾಗಬೇಕೆಂದರೆ ಸಂಘಟನೆ ಅವಶ್ಯಕವಾಗಿದೆ. ಪ್ರತಿಯೊಬ್ಬರೂ ಸಕ್ರಿಯ ಸದಸ್ಯತ್ವವನ್ನು ಹೊಂದಬೇಕು. ವೈಯಕ್ತಿಕ ಕೆಲಸದ ನಡುವೆಯೂ ಬಿಡುವು ಮಾಡಿಕೊಂಡು ಪಕ್ಷ ಸಂಘಟನೆಗೆ ಕೆಲಸ ಮಾಡಬೇಕು ಎಂದರು.

ಕಾರ್ಯಕ್ರಮದಲ್ಲಿ ಮಾಜಿ ಜಿ.ಪಂ ಉಪಾಧ್ಯಕ್ಷ ಬೀರಪ್ಪ ಬಂಡಿ, ನಿಂಗಪ್ಪ ಮಾದರ, ಎಸ್‌ಸಿ ಮೋರ್ಚಾ ಅಧ್ಯಕ್ಷ ಕೆ.ಡಿ. ಬಂಡಿ, ಶಶಿಧರ ದಿಂಡೂರು, ಡಿ. ಪ್ರಸಾದ, ಮುದ್ದಿಂಗಪ್ಪ ಕೊರ್ಲಹಳ್ಳಿ, ಶಿವಪ್ಪ ಅಂಕದ, ಎಲ್.ಎಂ. ಚವ್ಹಾಣ್, ಬಸವರಾಜ ಚೆನ್ನಳ್ಳಿ, ಮುಖಂಡ ಮಲ್ಲಪ್ಪ ಮಠದ, ಬಸಪ್ಪ ಕೊತಂಬ್ರಿ, ಚಂದ್ರು ಯಳಮಲಿ, ನಾಗರಾಜ ಕಾಟ್ರಹಳ್ಳಿ, ಭೀಮರಡ್ಡಿ ರಾಜೂರು, ಕಾರ್ಯಾದರ್ಶಿ ಬಸವರಾಜ ಸಂಗನಾಳ, ಪ್ರವೀಣ ವಡ್ಡಟ್ಟಿ, ವಿರೂಪಾಕ್ಷಿ ಯಲಿಗಾರ, ಪಂಚಾಕ್ಷರಿ ಹರ್ಲಾಪೂರಮಠ, ಮಲ್ಲಪ್ಪ ಮುದಗಣ್ಣವರ, ಜಗದೀಶ ತಳವಾರ ಸೇರಿದಂತೆ ಕಾರ್ಯಕರ್ತರು ಇದ್ದರು.

## ತಮಿಳು ಚಿತ್ರರಂಗದಲ್ಲಿ ಲೈಂಗಿಕ ಕಿರುಕುಳ ಮಿತಿಮೀರಿದೆ : ನಟಿ ಕುಟ್ಟಿ ಪದ್ಮಿನಿ



■ವಿಜಯಸಾಕ್ಷಿ ಸುದ್ದಿ, ಚೆನ್ನೈ

ತಮಿಳು ಚಿತ್ರರಂಗದಲ್ಲಿ ಲೈಂಗಿಕ ಕಿರುಕುಳ ಮಿತಿ ಮೀರಿದೆ ಎಂದು ಜನಪ್ರಿಯ ತಮಿಳು ನಟಿ ಮತ್ತು ದೂರದರ್ಶನ ಧಾರಾವಾಹಿ ನಿರ್ಮಾಪಕಿ ಕುಟ್ಟಿ ಪದ್ಮಿನಿ ಹೇಳಿದ್ದಾರೆ.

ಮಲಯಾಳಂ ಸಿನಿಮಾ ರಂಗದಲ್ಲಿ ನ್ಯಾಯಮೂರ್ತಿ ಹೇಮಾ ಸಮಿತಿಯ ವರದಿಯು ಸಂಚಲನ ಸೃಷ್ಟಿಸಿರುವ ನಡುವೆ ಕುಟ್ಟಿ ಪದ್ಮಿನಿಯವರ ಹೇಳಿಕೆ ಬಂದಿದೆ.

"ತಮಿಳು ಟೆಲಿವಿಷನ್ ಶೋ ಉದ್ಯಮದಲ್ಲಿ ಮಿತಿ ಮೀರಿ ಲೈಂಗಿಕ ಕಿರುಕುಳ ನಡೆಯುತ್ತಿದೆ. ಇದರಿಂದಾಗಿ ಅನೇಕ ಮಹಿಳೆಯರು 'ಆತ್ಮಹತ್ಯೆ' ಮಾಡಿಕೊಂಡಿದ್ದಾರೆ" ಎಂದು ಕುಟ್ಟಿ ಪದ್ಮಿನಿ ಆರೋಪಿಸಿದ್ದಾರೆ.


ಈ ಹಿಂದೆ ಲೈಂಗಿಕ ಕಿರುಕುಳದ ಆರೋಪ ಮಾಡಿದ್ದ ಗಾಯಕಿ ಚಿನ್ಮಯಿ ಮತ್ತು ನಟಿ ಶ್ರೀರೆಡ್ಡಿ ಮೇಲೆ ತಮಿಳು ಚಲನಚಿತ್ರೋದ್ಯಮ ನಿಷೇಧ ಹೇರಿತ್ತು ಎಂದಿರುವ ಪದ್ಮಿನಿ, ಈ ಕುರಿತು ಕಳವಳ ವ್ಯಕ್ತಪಡಿಸಿದ್ದಾರೆ. ಗೀತರಚನೆಕಾರ ವೈರಮುತ್ತು ವಿರುದ್ಧ ಗಾಯಕಿ ಚಿನ್ಮಯಿ ಲೈಂಗಿಕ ಕಿರುಕುಳ ಆರೋಪ ಮಾಡಿದ್ದರು.

"ನಿರ್ದೇಶಕರು ಮತ್ತು ತಂತ್ರಜ್ಞರು ಟಿವಿ ಧಾರಾವಾಹಿಗಳಲ್ಲಿನ ಮಹಿಳಾ ಕಲಾವಿದರಿಂದ ಲೈಂಗಿಕವಾಗಿ ಸಹಕರಿಸುವಂತೆ ಕೇಳುತ್ತಾರೆ. ಲೈಂಗಿಕ ಕಿರುಕುಳವನ್ನು ಸಾಬೀತುಪಡಿಸಲು ಸಾಧ್ಯವಾಗದ ಕಾರಣ ಅನೇಕ ಮಹಿಳೆಯರು ದೂರು ನೀಡುವುದಿಲ್ಲ. ಕೆಲ ಮಹಿಳೆಯರು ಹಣ ಹೆಚ್ಚಾಗಿ ಗಳಿಸಲು ಸಾಧ್ಯವಾಗುತ್ತದೆ ಎಂಬ ಕಾರಣಕ್ಕೆ ಈ ಕಿರುಕುಳವನ್ನು ಸಹಿಸಿಕೊಳ್ಳುತ್ತಾರೆ" ಎಂದು ಪದ್ಮಿನಿ ವಿವರಿಸಿದ್ದಾರೆ.

"ಕೇರಳದ ಚಿತ್ರರಂಗದಲ್ಲಿ ಲೈಂಗಿಕ ಕಿರುಕುಳದ ದೂರುಗಳು ದಾಖಲಾದಂತೆ ತಮಿಳುನಾಡಿನಲ್ಲಿ ಯಾವುದೇ ದೂರುಗಳು ದಾಖಲಾಗಿಲ್ಲ. ದೂರು ದಾಖಲಾದರೆ ನಾವು ಸೂಕ್ತ ಕ್ರಮವನ್ನು ಕೈಗೊಳ್ಳುತ್ತೇವೆ" ಎಂದು ತಮಿಳುನಾಡು ಸಚಿವ ಸ್ವಾಮಿನಾಥನ್ ಹೇಳಿದ್ದಾರೆ.

ಮಲಯಾಳಂ ಚಿತ್ರರಂಗದಂತೆ ತಮಿಳು ಚಿತ್ರರಂಗದಲ್ಲೂ ಮಹಿಳೆಯರ ಮೇಲೆ ನಡೆಯುತ್ತಿರುವ ದೌರ್ಜನ್ಯಗಳ ಕುರಿತು ಅಧ್ಯಯನ ಮಾಡಲು ಸಮಿತಿ ರಚಿಸಲಾಗುವುದು ಎಂದು ತಮಿಳು ಚಲನಚಿತ್ರ ಕಲಾವಿದರ ಸಂಘ (ನಡಿಗರ್ ಸಂಘಂ)ದ ಕಾರ್ಯದರ್ಶಿ ವಿಶಾಲ್ ತಿಳಿಸಿದ್ದಾರೆ.

## ದೆಹಲಿಯಿಂದ ಬಂದು ಬೆಂಗಳೂರಿನ ಮನೆಯಲ್ಲಿ ಕಳ್ಳತನ ಮಾಡಿದ್ದ ಗ್ಯಾಂಗ್ ಬಂಧನ!



■ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ದೆಹಲಿಯಿಂದ ಬಂದು ಬೆಂಗಳೂರಿನ ಮನೆ ಒಡೆದಿದ್ದ ಗ್ಯಾಂಗ್ ಅನ್ನು ಸಂಜಯ್ ನಗರ ಪೊಲೀಸರು ಬಂಧಿಸಿದ್ದಾರೆ.

ಅಕ್ಬರ್, ಸೋನು ಯಾದವ್ ಬಂಧಿತ ಆರೋಪಿಗಳು. ಸಂಜಯ್ ನಗರದ ರೇಣುಕಾ ಎಂಬುವರ ಮನೆಯಲ್ಲಿ 50 ಲಕ್ಷ ಮೌಲ್ಯದ 700 ಗ್ರಾಂ ಚಿನ್ನವನ್ನು ಆರೋಪಿಗಳು ಕದ್ದಿದ್ದರು. ಈ ಬಗ್ಗೆ ಪ್ರಕರಣ ದಾಖಲಿಸಿಕೊಂಡಿದ್ದ ಸಂಜಯ್ ನಗರ ಪೊಲೀಸರು ದೆಹಲಿಗೆ ತೆರಳಿ ಆರೋಪಿಗಳನ್ನು ಬಂಧಿಸಿದ್ದಾರೆ.

ಈ ಹಿಂದೆ ಹಲವು ರಾಜ್ಯಗಳಲ್ಲಿ ಕಳ್ಳತನ ಮಾಡಿದ್ದ ಆರೋಪಿಗಳು ಇದೇ ಮಾದರಿಯಲ್ಲಿ ಬೆಂಗಳೂರಿನಲ್ಲೂ ಕೃತ್ಯ ಎಸಗಿ ಪರಾರಿಯಾಗಿದ್ದಾರೆ.

ಕದ್ದ ಮಾಲುಗಳನ್ನು ಪತ್ನಿ ಮುಬೀನಾಗೆ ನೀಡುತಿದ್ದ ಅಕ್ಬರ್. ಕದ್ದ ಚಿನ್ನವನ್ನು ಮಾರಾಟ ಮಾಡಲು ಹೋದಾಗ ಸಿಕ್ಕಿಬಿದ್ದಿದ್ದಾರೆ. ಬಂಧಿತರಿಂದ 405 ಗ್ರಾಂ ಚಿನ್ನ ವಶಕ್ಕೆ ಪಡೆಯಲಾಗಿದ್ದು, ಸಂಜಯ್ ನಗರ ಪೊಲೀಸರು ತನಿಖೆ ಮುಂದುವರಿಸಿದ್ದಾರೆ.

## ಶಾಲೆಯಲ್ಲಿ ಹೆಜ್ಜೇನು ದಾಳಿ: 40ಕ್ಕೂ ಹೆಚ್ಚು ಮಕ್ಕಳಿಗೆ ಗಾಯ, 8 ಮಕ್ಕಳು ಗಂಭೀರ!



■ವಿಜಯಸಾಕ್ಷಿ ಸುದ್ದಿ, ಕೊಪ್ಪಳ

ಜಿಲ್ಲೆಯ ಕುಷ್ಟಗಿ ತಾಲೂಕಿನ ತಾವರಗೇರಾ ಪಟ್ಟಣದ ಕಿತ್ತೂರು ಚೆನ್ನಮ್ಮ ವಸತಿ ಶಾಲಾ ಆವರಣದಲ್ಲಿ ಕ್ರೀಡಾಕೂಟ ವೇಳೆ ಹೆಜ್ಜೇನು ದಾಳಿಯಿಂದ 40ಕ್ಕೂ ಹೆಚ್ಚು ಮಕ್ಕಳಿಗೆ ಗಾಯಗಳಾಗಿರುವಂತಹ ಘಟನೆ ಜರುಗಿದೆ.

ಕ್ರೀಡಾಕೂಟ ವೇಳೆ ಈ ದಾಳಿ ನಡೆದಿದೆ ಎನ್ನಲಾಗಿದೆ. ಘಟನೆಯಲ್ಲಿ 8 ಮಕ್ಕಳು ಗಂಭೀರವಾಗಿದ್ದು, ತಾವರಗೇರಾ ಸರ್ಕಾರಿ ಆಸ್ಪತ್ರೆಗೆ ಶಿಫ್ಟ್ ಮಾಡಲಾಗಿದೆ.

ಘಟನೆ ತಾವರಗೇರಾ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ನಡೆದಿದೆ.



ಬೆಟಗೇರಿಯ ಗೌರಿ ಗಣೇಶ ಶಿಕ್ಷಣ ಸಂಸ್ಥೆಯಲ್ಲಿ ಕೃಷ್ಣ ಜನ್ಮಾಷ್ಟಮಿ ಪ್ರಯುಕ್ತ ಶಾಲೆಯ ಮಕ್ಕಳು ಕೃಷ್ಣ ಮತ್ತು ರಾಧೆಯ ವೇಷಭೂಷಣ ಧರಿಸಿ ಸಂಭ್ರಮಿಸಿದರು. ಕಾರ್ಯಕ್ರಮದ ಅಧ್ಯಕ್ಷತೆಯನ್ನು ಶಾಲೆಯ ಆಡಳಿತ ಮಂಡಳಿಯ ಸದಸ್ಯ ಶಿವರಾಜಕುಮಾರ ಗೊಂಡಬಾಳ ಮತ್ತು ಮುಖ್ಯ ಅತಿಥಿಗಳಾಗಿ ಬಸವರಾಜ ಕುಂದಗೋಳ, ಮಂಜುಳಾ ರಜಪೂತ ಪಾಲ್ಗೊಂಡಿದ್ದರು. ಜಿ.ಎಮ್. ನೀಲವಾನಿ ನಿರೂಪಿಸಿದರು. ಎಸ್.ಎಸ್. ಗುಗ್ಗರಿ ವಂದಿಸಿದರು. ಕೆ.ಬಿ. ಮಾರನಬಸರಿ, ಎಸ್.ಎಮ್. ದೇವದರ, ಯು.ಕೆ. ಕೊಂಗಾರಿ, ಎಮ್.ಎಲ್. ಕೊಪ್ಪಳ ಎಮ್.ಜಿ. ಬಡ್ನಿ ಉಪಸ್ಥಿತರಿದ್ದರು.

### ಸೋಶಿಯಲ್ ಡೆಮಾಕ್ರಟಿಕ್ ಪಾರ್ಟಿ ಆಫ್ ಇಂಡಿಯಾದ ನಾಯಕರ ಸಭೆ

## ರೈಲ್ವೆ ಇಲಾಖೆಯ ತೀರ್ಮಾನದಲ್ಲಿ ಮುಂದಾಲೋಚನೆಯಿಲ್ಲ

■ವಿಜಯಸಾಕ್ಷಿ ಸುದ್ದಿ, ಗದಗ

ಸೋಶಿಯಲ್ ಡೆಮಾಕ್ರಟಿಕ್ ಪಾರ್ಟಿ ಆಫ್ ಇಂಡಿಯಾ ಗದಗ ಜಿಲ್ಲೆಯ ಹಸಿವು ಮತ್ತು ಭಯಮುಕ್ತ ಚಳುವಳಿಯಾಗಿರುವ ಎಸ್ಡಿಪಿಐ ಪಕ್ಷದ 2024-27 ಅವಧಿಗೆ ನಡೆದ ಆಂತರಿಕ ಚುನಾವಣೆಯಲ್ಲಿ ನೂತನವಾಗಿ ಆಯ್ಕೆಯಾಗಿರುವ ಬ್ರಾಂಚ್ ಪದಾಧಿಕಾರಿಗಳು ಮತ್ತು ವಿಧಾನಸಭಾ ಕ್ಷೇತ್ರ ಸಮಿತಿಗಳ ಸದಸ್ಯರ, ನಾಯಕರ ಸಭೆಯು ಪಕ್ಷದ ಕಛೇರಿಯಲ್ಲಿ ನಡೆಯಿತು.

ಮುಖ್ಯ ಅತಿಥಿಗಳಾಗಿ ಆಗಮಿಸಿದ್ದ ಎಸ್‌ಡಿಪಿಐ ರಾಜ್ಯ ಪ್ರಧಾನ ಕಾರ್ಯದರ್ಶಿ ಅಪ್ಸರ್ ಕೊಡ್ಲಿಪೇಟೆ ಪರಿಣಾಮಕಾರಿ ನಾಯಕತ್ವ ಮತ್ತು ಪ್ರಸ್ತುತ ಸನ್ನಿವೇಶದಲ್ಲಿ ಪರ್ಯಾಯ ರಾಜಕಾರಣದ ಅಗತ್ಯತೆ ಬಗ್ಗೆ ತರಬೇತಿ ನೀಡಿ ನಾಯಕರುಗಳೊಂದಿಗೆ ಸಂವಾದ ನಡೆಸಿದರು.

ನಂತರ ನಡೆದ ವಿಶೇಷ ಜಿಲ್ಲಾ ಸಮಿತಿ ಸಭೆಯಲ್ಲಿ ಪಕ್ಷದ ಆಂತರಿಕ ಚುನಾವಣೆಯ ಅವಲೋಕನ ನಡೆಸಿ ನೂತನವಾಗಿ ಆಯ್ಕೆಯಾಗಿರುವ ನಾಯಕರು ಜಿಲ್ಲೆಯ ಜನರ ಜ್ವಲಂತ ಸಮಸ್ಯೆಗಳ ಬಗ್ಗೆ ಗಮನ ಹರಿಸಬೇಕು ಎಂದು ಕಿವಿಮಾತು ಹೇಳಿದರು.

ಪ್ರಾಸ್ತಾವಿಕವಾಗಿ ಮಾತನಾಡಿದ ಅಪ್ಸರ್ ಕೊಡ್ಲಿಪೇಟೆ, ಹುಬ್ಬಳ್ಳಿ-ವಿಜಯಪುರ, ಹುಬ್ಬಳ್ಳಿ-ಸೊಲ್ಲಾಪುರ ರೈಲುಗಳನ್ನು ಗದಗ ಜಂಕ್ಷನ್ ಬದಲಿಗೆ ಗದಗ ಬೈಪಾಸ್ ಮುಖಾಂತರ ಓಡಿಸುವ ತೀರ್ಮಾನದಲ್ಲಿ ಯಾವುದೇ ಮುಂದಾಲೋಚನೆಯಿಲ್ಲ ಎಂದು ಅಸಮಾಧಾನ ವ್ಯಕ್ತಪಡಿಸಿದರು.




ಮುಂದುವರಿದು ಮಾತನಾಡಿದ ಅವರು, ಅಮೃತ್ ಭಾರತ್ ಯೋಜನೆಯಡಿ 23.05 ಕೋಟಿ ರೂ. ವೆಚ್ಚದಲ್ಲಿ ಗದಗ ರೈಲು ನಿಲ್ದಾಣವನ್ನು ಅಭಿವೃದ್ಧಿ ಮಾಡಲಾಗುತ್ತಿದೆ. ಇಂತಹ ಸಮಯದಲ್ಲಿಯೇ ನಗರದಿಂದ 10 ಕಿ. ಮೀ. ದೂರದಲ್ಲಿರುವ ಬೈಪಾಸ್ ನಿಲ್ದಾಣಕ್ಕೆ ರೈಲುಗಳನ್ನು ಸ್ಥಳಾಂತರ ಮಾಡುತಿರುವುದು ಉತ್ತರ ಕರ್ನಾಟಕ ಭಾಗದ ರೈಲು ಪ್ರಯಾಣಿಕರು ಅದರಲ್ಲೂ ಗದಗದ ಜನರಿಗೆ ರೈಲ್ವೆ ಇಲಾಖೆ ಮಾಡುತಿರುವ ಅನ್ಯಾಯವಾಗಿದೆ. ಗದಗ ಜಂಕ್ಷನ್‌ಗೆ ರೈಲು ಬರಬೇಕು ಎಂಬುದು ಈ ಭಾಗದ ಜನರ ಬೇಡಿಕೆಯಾಗಿದೆ. ಗದಗ ಜಿಲ್ಲಾ ನಾಯಕರು ಈ ಬಗ್ಗೆ ಪಕ್ಷದ ವತಿಯಿಂದ ನೈರುತ್ಯ ರೈಲ್ವೆ ಅಧಿಕಾರಿಗಳಿಗೆ ಜನರ ಪರವಾಗಿ ಮನವಿ ಸಲ್ಲಿಸಲು ಸಲಹೆ ನೀಡಿದರು.

ಈ ಸಭೆಯಲ್ಲಿ ಪಕ್ಷದ ಜಿಲ್ಲಾಧ್ಯಕ್ಷ ಬಿಲಾಲ್ ಗೋಕಾವಿ, ಉಪಾಧ್ಯಕ್ಷ ಹಿದಾಯತುಲ್ಲಾ ಕಾಗದಗಾರ, ಕಾರ್ಯದರ್ಶಿ ಇರ್ಫಾನ್ ಗುಳಗುಂದಿ, ಪ್ರಧಾನ ಕಾರ್ಯದರ್ಶಿ ಅನ್ವರ್ ಬಾಗೇವಾಡಿ, ಗದಗ ವಿಧಾನಸಭಾ ಕ್ಷೇತ್ರದ ಅಧ್ಯಕ್ಷ ಮೊಹಮ್ಮದ್ ಅಫ್ಜಾನ್, ಉಪಾಧ್ಯಕ್ಷ ಮುಸ್ತಾಕ್ ಹೊಸಮನಿ, ಶಿರಹಟ್ಟಿ ವಿಧಾನಸಭಾ ಕ್ಷೇತ್ರದ ಅಧ್ಯಕ್ಷ ಇಸ್ಮಾಯಿಲ್ ನದಾಫ್, ಉಪಾಧ್ಯಕ್ಷ ಮುಝಮ್ಮಿಲ್ ಮತ್ತು ಸದಸ್ಯರು ಉಪಸ್ಥಿತರಿದ್ದರು.

ಕೊಪ್ಪಳ, ವಿಜಯನಗರ, ಬಳ್ಳಾರಿ ಭಾಗದ ಜನರು ಗದಗ ಜಂಕ್ಷನ್‌ನಲ್ಲಿ ಇಳಿದು ರೈಲು ಬದಲಾವಣೆ ಮಾಡುತ್ತಿದ್ದರು. ಈಗ ರೈಲು ಗದಗ ಬೈಪಾಸ್‌ನಲ್ಲಿ ನಿಂತರೆ ಅಲ್ಲಿಂದ 200 ರೂ. ಆಟೋ ಬಾಡಿಗೆ ಪಾವತಿ ಮಾಡಿ ಮತ್ತೆ ಗದಗ ಜಂಕ್ಷನ್‌ಗೆ ಆಗಮಿಸಬೇಕು. ಬೈಪಾಸ್‌ಗೆ ರೈಲು ಸ್ಥಳಾಂತರ ಯಾವುದೇ ಮುಂದಾಲೋಚನೆ ಇಲ್ಲದ ತೀರ್ಮಾನ ಎಂದು ಅಪ್ಸರ್ ಕೊಡ್ಲಿಪೇಟೆ ಆರೋಪಿಸಿದರು.

## ಪವರ್ ಮಿನಿಸ್ಟರ್ ಗೆ ಕಾಡಿದ ಪವರ್: ಸಭೆಯಲ್ಲಿ ಪದೇ-ಪದೇ ಕರೆಂಟ್ ಸಮಸ್ಯೆ!

■ವಿಜಯಸಾಕ್ಷಿ ಸುದ್ದಿ, ಕೋಲಾರ

ಕೋಲಾರ ಜಿಲ್ಲಾ ಕಾಂಗ್ರೆಸ್ ಕಚೇರಿಯಲ್ಲಿ ಇಂಧನ ಸಚಿವ ಕೆಜೆ ನೇತೃತ್ವದಲ್ಲಿ ನಡೆದ ಸಭೆಯಲ್ಲಿ ಪದೇ ಪದೇ ಕರೆಂಟ್ ಕಟ್ ಆಗುತ್ತಿದ್ದು, ಪವರ್ ಮಿನಿಸ್ಟರ್ ಗೆ ಪವರ್ ಕಾಡಿದೆ.

ಸಚಿವರು ಬರುತ್ತಿದ್ದಂತೆ ಕಾಂಗ್ರೆಸ್ ಕಚೇರಿಯಲ್ಲಿ ವಿದ್ಯುತ್ ಕಟ್ ಆಯಿತು. ಅಕಸ್ಮಿಕವಾಗಿ ವಿದ್ಯುತ್ ಹೋಗಿರಬಹುದು ಎಂದು ಅರಿತ ಸಚಿವರು, ಸಭೆಯನ್ನು ಮುಂದುವರಿಸಿ ಕಾರ್ಯಕರ್ತರನ್ನುದ್ದೇಶಿಸಿ ಮಾತನಾಡಿ ಸಭೆ ಮುಗಿಸಿದರೂ ವಿದ್ಯುತ್ ಬರಲೇ ಇಲ್ಲ.

ಬಳಿಕ ಜಿಲ್ಲಾ ಪಂಚಾಯತ್ ನಲ್ಲಿ ಜಿಲ್ಲಾ ಮಟ್ಟದ ಅಧಿಕಾರಿಗಳೊಂದಿಗೆ ಪ್ರಗತಿ



ಪರಿಶೀಲನಾ ಸಭೆ ನಡೆಸಿದರು. ಈ ವೇಳೆ ಕೂಡ ವಿದ್ಯುತ್ ಹೋಗಿ ಬಂತು. ವಿದ್ಯುತ್ ಕಣ್ಣಾಮುಚ್ಚಾಲೆ ಆಟಕ್ಕೆ ಬೇಸತ್ತ ಸಚಿವ ಕೆ.ಜೆ.ಜಾರ್ಜ್, 'ಬೆಸ್ಕಾಂ ಅಧಿಕಾರಿಗಳಿಗೆ ಸಭೆಯಲ್ಲಿಯೇ ಕ್ಲಾಸ್ ತೆಗೆದುಕೊಂಡರು.

ನಂತರ ಬೆಂಗಳೂರಿಗೆ ಹೋಗುವಾಗ ಇಇ ಶೋಭಾ ಅವರನ್ನು ತೀವ್ರ ತರಾಟೆ ತೆಗೆದುಕೊಂಡರು.

ಈ ಸಂದರ್ಭದಲ್ಲಿ ಅಧಿಕಾರಿಗಳು ಸಮಾಧಾನ ಪಡಿಸಿದರು. ಇನ್ನು ವಿದ್ಯುತ್ ಕಿರಿಕಿರಿ ಬಗ್ಗೆ ನಾನು ಅಡ್ಜೆಸ್ಟ್ ಮಾಡಿಕೊಳ್ಳುವೆ. ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಬಂದಾಗ ವಿದ್ಯುತ್ ಸಮಸ್ಯೆ ಆಗಬಾರದು. ಕೂಡಲೇ ಈ ಬಗ್ಗೆ ಎಚ್ಚೆತ್ತುಕೊಳ್ಳಬೇಕು ಎಂದು ಅಧಿಕಾರಿಗಳಿಗೆ ಸಚಿವರು ಎಚ್ಚರಿಕೆ ನೀಡಿದರು.

## ನಾಡಬಾಂಬ್ ಸ್ಫೋಟ; ಮಗ ಸಾವು, ತಂದೆ ಗಂಭೀರ!




■ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ಜಿಲ್ಲೆಯ ಹೊಸಕೋಟೆ ತಾಲೂಕಿನ ದೊಡ್ಡನಲ್ಲಾಳ ಗ್ರಾಮದ ಮನೆಯಲ್ಲಿ ನಾಡಬಾಂಬ್ ಸ್ಫೋಟಗೊಂಡು ಮಗ ಮೃತಪಟ್ಟಿದ್ದು, ತಂದೆಗೆ ಗಂಭೀರ ಗಾಯಗಳಾಗಿರುವ ಘಟನೆ ಜರುಗಿದೆ.

ದೊಡ್ಡನಲ್ಲಾಳ ಗ್ರಾಮದ 19 ವರ್ಷದ ಪವನ್ ಮೃತ ಯುವಕ ಎನ್ನಲಾಗಿದೆ. ಮನೆಯಲ್ಲಿ ನಾಡಬಾಂಬ್ ಸುತ್ತುವಾಗ ಸ್ಫೋಟವಾಗಿರುವ ಶಂಕೆ ವ್ಯಕ್ತವಾಗಿದ್ದು, ಸ್ಫೋಟದ ರಭಸಕ್ಕೆ ಮನೆಯ ಮೇಲ್ಛಾವಣಿ ಛಿದ್ರ ಛಿದ್ರವಾಗಿದೆ ಎಂದು ತಿಳಿದುಬಂದಿದೆ.

ಕಾಡು ಪ್ರಾಣಿಗಳ ಬೇಟೆಗಾಗಿ ನಾಡಬಾಂಬ್ ತಯಾರಿಸುತ್ತಿದ್ದ ವೇಳೆ ಸ್ಫೋಟವಾಗಿರುವ ಶಂಕೆ ವ್ಯಕ್ತವಾಗಿದ್ದು, ಘಟನಾ ಸ್ಥಳಕ್ಕೆ ಹೊಸಕೋಟೆ ಪೊಲೀಸರು ಭೇಟಿ ನೀಡಿ, ಪರಿಶೀಲನೆ ನಡೆಸಿದ್ದಾರೆ.

## ಈರುಳ್ಳಿ ಬೆಲೆ ದಿಢೀರ್ ಏರಿಕೆ: ರೈತರು ಖುಷ್, ಗ್ರಾಹಕರು ಶಾಕ್!



■ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ಕರ್ನಾಟಕದಲ್ಲಿ ಈರುಳ್ಳಿ ಬೆಲೆ ದಿಢೀರ್ ಏರಿಕೆ ಆಗಿದ್ದು, ಇನ್ನಷ್ಟು ಹೆಚ್ಚಳ ಆಗುವ ಸಾಧ್ಯತೆ ಇದೆ.

ಒಂದು ಕೆಜಿ ಈರುಳ್ಳಿಯ ಬೆಲೆ 60-70 ರೂಪಾಯಿ ಆಗಿದೆ. ಹಬ್ಬದ ವೇಳೆಗೆ ಈರುಳ್ಳಿಯ ಬೆಲೆ ಮತ್ತಷ್ಟು ದುಬಾರಿಯಾಗುವ ಸಾಧ್ಯತೆ ಇದೆ ಎಂದು ಮಾರುಕಟ್ಟೆ ಮೂಲಗಳು ತಿಳಿಸಿವೆ.

ಈ ಹಿಂದೆ ಉತ್ತರ ಕರ್ನಾಟಕ ಭಾಗದಿಂದ ರಾಜ್ಯಕ್ಕೆ ಈರುಳ್ಳಿ ಪೂರೈಕೆಯಾಗುತ್ತಿತ್ತು. ಆದರೆ, ಉತ್ತರ ಕರ್ನಾಟಕದಲ್ಲಿ ಹೆಚ್ಚು ಮಳೆಯಾಗುತ್ತಿದ್ದು, ಪರಿಣಾಮವಾಗಿ ಈರುಳ್ಳಿ ಬೆಳೆ ಕೊಳೆತು ಹೋಗುತ್ತಿದೆ. ಹೀಗಾಗಿ ಈರುಳ್ಳಿ ಪೂರೈಕೆ ಕಡಿಮೆಯಾಗಿದೆ.

ಯಶವಂತಪುರ ಹಾಗೂ ದಾಸನಪುರ ಎಪಿಎಂಸಿಗೆ ಬುಧವಾರ 127 ಲಾರಿಗಳಲ್ಲಿ 38,415 ಚೀಲ ಈರುಳ್ಳಿ ಆವಕವಾಗಿತ್ತು. ಇದರಲ್ಲಿ ರಾಜ್ಯದ ಹತ್ತಿಪ್ಪತ್ತು ಲಾರಿಗಳು ಮಾತ್ರ ಸೇರಿವೆ. ಉಳಿದವೆಲ್ಲ ಪೂನಾದಿಂದ ಬಂದಿವೆ. ಸಗಟು ದರ ಕ್ವಿಂಟಲ್‌ಗೆ ಕನಿಷ್ಠ 2 ಸಾವಿರದಿಂದ ಗರಿಷ್ಠ 4500 ರೂ. ಇತ್ತು. ನಗರದ ಚಿಲ್ಲರೆ ಮಾರುಕಟ್ಟೆಯಲ್ಲಿ ಕೆಜಿಗೆ 55ರಿಂದ 60 ರೂ.ಗೆ ಮಾರಾಟವಾಗಿದೆ.

## ರಾಜ್ಯಕ್ಕೆ ಹೊಸ ಸಿಎಂ ಎಂಬ ಬಿಜೆಪಿ ನಾಯಕರ ಹೇಳಿಕೆಗೆ ಸಿದ್ದರಾಮಯ್ಯ ತಿರುಗೇಟು.!

■ವಿಜಯಸಾಕ್ಷಿ ಸುದ್ದಿ, ಹುಬ್ಬಳ್ಳಿ

ಕಾಂಗ್ರೆಸ್ ಸಚಿವರು, ಶಾಸಕರು ಹಾಗೂ ಸಂಸದರು ಸೇರಿಕೊಂಡು ಶನಿವಾರ ರಾಜ್ಯಪಾಲರನ್ನು ಭೇಟಿಯಾಗಲಿದ್ದೇವೆ ಎಂದು ಸಿಎಂ ಸಿದ್ದರಾಮಯ್ಯ ಹೇಳಿದರು.

ಹುಬ್ಬಳ್ಳಿಯ ವಿಮಾನ ನಿಲ್ದಾಣದಲ್ಲಿ ಶುಕ್ರವಾರ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಕಾಂಗ್ರೆಸ್ ಸಚಿವರು, ಶಾಸಕರು ಹಾಗೂ ಸಂಸದರು ಸೇರಿಕೊಂಡು ಶನಿವಾರ ರಾಜ್ಯಪಾಲರನ್ನು ಭೇಟಿಯಾಗಲಿದ್ದೇವೆ. ಎಚ್.ಡಿ. ಕುಮಾರಸ್ವಾಮಿ, ಮುರುಗೇಶ ನಿರಾಣಿ ಹಾಗೂ ಜನಾರ್ಧನ ರಡ್ಡಿ ಅವರ ಮೇಲಿರುವ ಪ್ರಾಸಿಕ್ಯೂಷನ್ ತನಿಖೆಗೆ ಆಗ್ರಹಿಸಲಾಗುವುದು.

ಈ ಪ್ರಕರಣಗಳಲ್ಲೂ ದೋಷಾರೋಪಣೆ ಪಟ್ಟಿ ಸಲ್ಲಿಕೆಯಾಗಿ ತನಿಖೆಯೂ ಪೂರ್ಣಗೊಂಡಿದೆ.



ನಮ್ಮ ಪ್ರಕರಣದಲ್ಲಿ ಯಾವುದೇ ವಿಚಾರಣೆ ಆಗಿಲ್ಲ. ಎಲ್ಲವನ್ನೂ ಸೂಕ್ಷ್ಮವಾಗಿ ಗಮನಿಸಿದರೆ ಬಿಜೆಪಿ ಮತ್ತು ಜೆಡಿಎಸ್ ನಾಯಕರು ಸರ್ಕಾರವನ್ನು ಅಸ್ಥಿರ ಗೊಳಿಸುವ ಪ್ರಯತ್ನದಲ್ಲಿದ್ದಾರೆ ಎಂಬುದು ಸ್ಪಷ್ಟ ಎಂದರು.

ಇನ್ನೂ ರಾಜ್ಯಕ್ಕೆ ಹೊಸ ಸಿಎಂ ಬರಲಿದ್ದಾರೆ ಎಂಬ ಬಿಜೆಪಿ ನಾಯಕರ ಹೇಳಿಕೆಗೆ ಅವರು ರಾಜೀನಾಮೆಗೆ ಆಗ್ರಹಿಸಿದ ಕೂಡಲೇ ಕೊಡೋಕೆ ಆಗೋದಿಲ್ಲ. ವಿಜಯೇಂದ್ರ ರಾಜೀನಾಮೆ ನೀಡುವಂತೆ ನಾನೂ ಆಗ್ರಹಿಸುತ್ತೇನೆ. ರಾಜ್ಯಾಧ್ಯಕ್ಷರ ಸ್ಥಾನಕ್ಕೆ ಅವರು ರಾಜೀನಾಮೆ ಕೊಡ್ತಾರಾ ಎಂದು ಪ್ರಶ್ನಿಸಿದರು. ಅಲ್ಲದೆ, ಪ್ರಾಸಿಕ್ಯೂಷನ್ ವಿಚಾರವಾಗಿ ಶನಿವಾರ ವಿಚಾರಣೆ ನಡೆಯಲಿದೆ. ಹೈಕೋರ್ಟ್ ತೀರ್ಮಾನ ಏನೆಂಬುದು ಸ್ಪಷ್ಟವಾಗಲಿದೆ ಎಂದರು.

ಈ ಸಂದರ್ಭದಲ್ಲಿ ಪ್ರವಾಸೋದ್ಯಮ ಸಚಿವ ಎಚ್.ಕೆ.ಪಾಟೀಲ ಸೇರಿದಂತೆ ಮುಖಂಡರು ಉಪಸ್ಥಿತರಿದ್ದರು.

## ಪೋಕ್ಸೋ ಪ್ರಕರಣ : ಯಡಿಯೂರಪ್ಪ ಅರ್ಜಿ ವಿಚಾರಣೆ ಸೆ.5ಕ್ಕೆ ಮುಂದೂಡಿಕೆ



■ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ಪೋಕ್ಸೊ ಪ್ರಕರಣದಲ್ಲಿ ಜಾಮೀನು ಮತ್ತು ಬೆಂಗಳೂರಿನ ಸದಾಶಿವನಗರ ಠಾಣೆಯಲ್ಲಿ ದಾಖಲಾಗಿರುವ ಎಫ್ಐಆರ್ ರದ್ದು ಕೋರಿ ಮಾಜಿ ಮುಖ್ಯಮಂತ್ರಿ ಬಿಎಸ್ ಯಡಿಯೂರಪ್ಪ ಸಲ್ಲಿಸಿರುವ ಅರ್ಜಿಯ ವಿಚಾರಣೆಯನ್ನು ಹೈಕೋರ್ಟ್ ಸೆಪ್ಟೆಂಬರ್ 5ಕ್ಕೆ ಮುಂದೂಡಿದೆ.

ಯಡಿಯೂರಪ್ಪ ಸಲ್ಲಿಸಿರುವ ಅರ್ಜಿಯ ವಿಚಾರಣೆ ನ್ಯಾಯಮೂರ್ತಿ ಎಂ ನಾಗಪ್ರಸನ್ನ ಅವರ ಏಕಸದಸ್ಯ ಪೀಠದಲ್ಲಿ ಇಂದು (ಆ.30) ನಡೆಯಿತು.

ಸಿಐಡಿ ಪರವಾಗಿ ನ್ಯಾಯಾಲಯಕ್ಕೆ ಹಾಜರಾಗಿದ್ದ ವಿಶೇಷ ಸರ್ಕಾರಿ ಅಭಿಯೋಜಕ ಅಶೋಕ್ ನಾಯ್ಕ್ ಅವರು "ಹೆಚ್ಚುವರಿ ಆರೋಪ ಪಟ್ಟಿ ಸಲ್ಲಿಸಲಾಗುತ್ತಿದ್ದು, ಸ್ವಲ್ಪ ಕಾಲಾವಕಾಶ ನೀಡಬೇಕು" ಎಂದರು.

ಯಡಿಯೂರಪ್ಪ ಅವರನ್ನು ಪ್ರತಿನಿಧಿಸಿದ್ದ ಹಿರಿಯ ವಕೀಲ ಸಿವಿ ನಾಗೇಶ್ ಅವರು, ಸರ್ಕಾರದ ಸಚಿವರು, ಶಾಸಕರು ಯಡಿಯೂರಪ್ಪ ವಿರುದ್ಧ ಹೇಳಿಕೆ ನೀಡುತ್ತಿರುವುದಕ್ಕೆ ನ್ಯಾಯಾಲಯದಲ್ಲಿ ಆಕ್ಷೇಪ ವ್ಯಕ್ತಪಡಿಸಿದರು.


"ಪೋಕ್ಸೊ ಪ್ರಕರಣದಲ್ಲಿ ಮಾಜಿ ಮುಖ್ಯಮಂತ್ರಿ ಬಿಎಸ್ ಯಡಿಯೂರಪ್ಪ ಜೈಲಿಗೆ ಹೋಗುತ್ತಾರೆ ಎಂದು ಆಡಳಿತಾರೂಢ ಕಾಂಗ್ರೆಸ್‌ನ ಸಚಿವರು, ಶಾಸಕರು ದಿನ ಬೆಳಗಾದರೆ ಹೇಳಿಕೆ ನೀಡುತ್ತಿದ್ದಾರೆ. ಹಾಗಾದರೆ, ಅವರೇ ಬಂದು ವಾದಿಸಲಿ" ಎಂದು ಸಿವಿ ನಾಗೇಶ್ ಮೌಖಿಕವಾಗಿ ಅಸಮಾಧಾನ ವ್ಯಕ್ತಪಡಿಸಿದರು.

## ಪ್ರಶ್ನೆಗಳನ್ನು ಅನುವಾದ ಮಾಡಿದ್ದು ಭಾಷಾಂತರಕಾರರು : ಕೆಪಿಎಸ್‌ಸಿ ಸ್ಪಷ್ಟನೆ

■ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ಗೆಜೆಟೆಡ್ ಪ್ರೊಬೇಷನರಿ ಹುದ್ದೆಗಳ ನೇಮಕಾತಿಗಾಗಿ ನಡೆದ ಪೂರ್ವಭಾವಿ ಪರೀಕ್ಷೆಯ ಪ್ರಶ್ನೆಗಳ ಕನ್ನಡ ಅನುವಾದ ಮಾಡಿದ್ದು ಗೂಗಲ್ ಅಥವಾ ಎಐ ಅಲ್ಲ. ಭಾಷಾಂತರ ಇಲಾಖೆಯ ಭಾಷಾಂತರಕಾರರು ಮಾಡಿದ್ದು ಎಂದು ಕರ್ನಾಟಕ ಲೋಕ ಸೇವಾ ಆಯೋಗ (ಕೆಪಿಎಸ್‌ಸಿ) ಹೇಳಿದೆ.

ಈ ಕುರಿತು ಪ್ರಕಟಣೆ ಹೊರಡಿಸಿರುವ ಕೆಪಿಎಸ್‌ಸಿ ಕಾರ್ಯದರ್ಶಿ ರಾಕೇಶ್ ಕುಮಾರ್ "ಪ್ರಶ್ನೆಗಳ ಭಾಷಾಂತರ ಕಾರ್ಯವು ಆಯೋಗದ ಕಚೇರಿಯಲ್ಲಿಯೇ ಭಾಷಾಂತರ



ಇಲಾಖೆಯಿಂದ ನಿಯೋಜಿಸಲ್ಪಟ್ಟ ಭಾಷಾಂತರಕಾರರಿಂದ ನಡೆಸಲಾಗಿದೆಯೇ ಹೊರತು, ಗೂಗಲ್ ಭಾಷಾಂತರ ಹಾಗೂ ಕೃತಕ ಬುದ್ಧಿಮತ್ತೆಗಳನ್ನು ಬಳಸಿಲ್ಲ. ಕೆಪಿಎಸ್‌ಸಿ ನಿಯಮಗಳಲ್ಲೂ ಅದಕ್ಕೆ ಅವಕಾಶ ಇಲ್ಲ ಎಂದು ತಿಳಿಸಿದ್ದಾರೆ

ಪ್ರಶ್ನೆ ಪತ್ರಿಕೆಗಳಲ್ಲಿನ ಪ್ರಶ್ನೆಗಳಲ್ಲಿ ಅಥವಾ ಪ್ರಶ್ನೆಗಳ ಭಾಷಾಂತರದಲ್ಲಿ ತೀರಾ ಗೊಂದಲವುಂಟಾದಲ್ಲಿ ಆಯೋಗದಿಂದ ಪ್ರಕಟಿಸಿರುವ ಕೀ-ಉತ್ತರಗಳಿಗೆ ಅಭ್ಯರ್ಥಿಗಳು ಆಕ್ಷೇಪಣೆ ಸಲ್ಲಿಸಬಹುದು. ಈ ಎಲ್ಲಾ ಪ್ರಶ್ನೆಗಳಿಗೆ ಸಂಬಂಧಿಸಿದಂತೆ ವಿಷಯ ತಜ್ಞರುಗಳ ಸಮಿತಿಯ ಅಭಿಪ್ರಾಯ ಪಡೆದು ಕ್ರಮ ಕೈಗೊಳ್ಳಲಾಗುವುದು ಎಂದು ಹೇಳಿದ್ದಾರೆ.

ಆಕ್ಷೇಪಣೆಗೆ ಸೆ.4ರವರೆಗೆ ಅವಕಾಶ : ಪೂರ್ವಭಾವಿ ಪರೀಕ್ಷೆಯ ಕೀ-ಉತ್ತರಗಳನ್ನು ಕೆಪಿಎಸ್‌ಸಿ ಬಿಡುಗಡೆ ಮಾಡಿದ್ದು, ಆಕ್ಷೇಪಣೆಗಳನ್ನು ಸಲ್ಲಿಸಲು ಸೆ.4ರವರೆಗೆ ಅವಕಾಶವಿದೆ. ಆಕ್ಷೇಪಣೆಗಳನ್ನು ಅಂದು ಸಂಜೆ 5.30ರೊಳಗೆ ಸಲ್ಲಿಸಲು ಆಯೋಗ ಸೂಚಿಸಿದೆ. ಆಕ್ಷೇಪಣೆ ಸಲ್ಲಿಸಲು ಪ್ರತಿ ಪ್ರಶ್ನೆಗೆ ರೂ.50 ಶುಲ್ಕ ನಿಗದಿ ಮಾಡಿದೆ.

### ಲಿಂ.ಶ್ರೀ ಶಂಕರ ಶಿವಾಚಾರ್ಯ ಮಹಾಸ್ವಾಮಿಗಳ ಪುಣ್ಯಾರಾಧನೆ ಕಾರ್ಯಕ್ರಮ

# ನೆಮ್ಮದಿಯ ಬದುಕಿಗೆ ಗುರು ಕಾರುಣ್ಯ ಅಗತ್ಯ



**■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಬದುಕಿನಲ್ಲಿ ಶಾಂತಿ, ನೆಮ್ಮದಿ, ಸಂಪತ್ತು, ಜ್ಞಾನ ಹೊಂದಲು ಗುರುವಿನ ಶ್ರೀರಕ್ಷೆ ಅವಶ್ಯ ಎಂದು ಬನ್ನಿಕೊಪ್ಪದ ಡಾ. ಸುಜ್ಞಾನದೇವ ಶಿವಾಚಾರ್ಯರು ಹೇಳಿದರು.

ಅವರು ಶುಕ್ರವಾರ ರಾತ್ರಿ ಪಟ್ಟಣದ ಕರೇವಾಡಿಮಠದ ಲಿಂ.ಶ್ರೀ ಶಂಕರ ಶಿವಾಚಾರ್ಯ ಮಹಾಸ್ವಾಮಿಗಳ ಪುಣ್ಯಾರಾಧನೆ ಕಾರ್ಯಕ್ರಮದ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡಿ, 'ಧರ್ಮೋ ರಕ್ಷತಿ ರಕ್ಷಿತಃ' ಎಂಬಂತೆ ಧರ್ಮ ರಕ್ಷಣೆ, ಜಾಗೃತಿ, ಸಂಸ್ಕಾರ, ಸದ್ಗತಿ, ಸನ್ಮಾರ್ಗ, ತ್ರಿವಿಧ ದಾಸೋಹ ಸೇವೆ ನೀಡುವ ಮಠಾಧೀಶರಿಗೆ ಸಲ್ಲಿಸುವ ಭಕ್ತಿಯ ಕಾಣಿಕೆ (ಸೇವೆ) ಸಮಾಜದ ಉಪಯೋಗಕ್ಕೆ ಸಲ್ಲುತ್ತದೆ. ಹುಟ್ಟು ಆಕಸ್ಮಿಕ, ಸಾವು ನಿಶ್ಚಿತ. ಈ ನಡುವಿನ ಜೀವನದಲ್ಲಿ ಬದುಕಿನ ಸಾರ್ಥಕತೆಗಾಗಿ ಕೈಲಾದ ಮಟ್ಟಿನ ಸಮಾಜ ಸೇವೆ, ಧಾನ, ಧರ್ಮ ಕಾರ್ಯ ಮಾಡಬೇಕು. ಸಮಾಜದ ಉದ್ಧಾರ, ಭಕ್ತರ ಕಷ್ಟ, ನೋವುಗಳು ದೂರವಾಗಿ ಶಾಚಿತಿ, ನೆಮ್ಮದಿಯ ಬದುಕಿಗೆ ಗುರುಗಳ ಕೃಪಾ ಕಾರುಣ್ಯ ಅಗತ್ಯ. ಅದಕ್ಕಾಗಿ ಪ್ರತಿಯೊಬ್ಬರೂ ತಮ್ಮ ಕೈಲಾದ ಅಳಿಲು ಸೇವೆ ಮಾಡುವ ಮೂಲಕ ಬದುಕನ್ನು ಸಾರ್ಥಕಗೊಳಿಸಿಕೊಳ್ಳಬೇಕು ಎಂದರು.

ಕರೇವಾಡಿಮಠದ ನಿಯೋಜಿತ ಉತ್ತರಾಧಿಕಾರಿ ಮಂಜುನಾಥ ದೇವರು ಮಾತನಾಡಿದರು. ಬೆಳಿಗ್ಗೆ ಮುಕ್ತಿಮಂದಿರ ಧರ್ಮಕ್ಷೇತ್ರದ ಶ್ರೀ ವೀಮಲರೇಣುಕ ವೀರಮುಕ್ತಿಮುನಿ ಶಿವಾಚಾರ್ಯ ಮಹಾಸ್ವಾಮಿಗಳ ನೇತೃತ್ವದಲ್ಲಿ ಧಾರ್ಮಿಕ ಪೂಜಾ ಕಾರ್ಯಕ್ರಮಗಳು ನಡೆದವು. ಶಂಕ್ರಯ್ಯ ಪೂಜಾರ, ಬಸಯ್ಯಶಾಸ್ತ್ರೀ ಸೂರಣಗಿಮಠ ಪೌರೋಹಿತದಲ್ಲಿ ಜಂಗಮ ವಟುಗಳಿಗೆ ಆಯ್ಯಾಚಾರ, ಶಿವದೀಕ್ಷೆ ಕಾರ್ಯಕ್ರಮ ನಡೆಯಿತು.

ರುದ್ರ ಬಳಗದಿಂದ ರುದ್ರ ಪಠಣ ಸೇರಿ ಧಾರ್ಮಿಕ ಕಾರ್ಯಕ್ರಮಗಳು ನಡೆದವು. ಹರ್ಲಾಪುರದ ಶಾಂಭಯ್ಯ ಹಿರೇಮಠ ಅವರ ಜಾನಪದ ತಂಡದಿಂದ ಜಾಗೃತಿಗಾಗಿ ಜಾನಪದ ಕಾರ್ಯಕ್ರಮ, ಶಾರದಾ ಸ್ವರಾಂಜಲಿ ಸಂಗೀತ ಶಾಲೆ ಮಕ್ಕಳಿಂದ ಸಂಗೀತ ಕಾರ್ಯಕ್ರಮ, ಹಳ್ಳದಕೇರಿ ಓಣಿಯ ಶಕ್ತಿ ಭಜನಾ ಸಂಘ, ಮಾರುತಿ ಭಜನಾ ಸಂಘದಿಂದ ಭಜನಾ ಕಾರ್ಯಕ್ರಮಗಳು ನಡೆದವು. ಈ ವೇಳೆ ಸಂಗಯ್ಯ ಹಿರೇಮಠ ಹಿರಿಯರು, ಭಕ್ತರು ಇದ್ದರು. ಶಿವರಾಜಯ್ಯ ಕರೇವಾಡಿಮಠ, ಬಿ.ಟಿ. ಪಾಟೀಲ ನಿರ್ವಸಿದರು.

ದಿವ್ಯ ಸಾನ್ನಿಧ್ಯ ವಹಿಸಿದ್ದ ಲಕ್ಷ್ಮೇಶ್ವರ ಕರೇವಾಡಿಮಠದ ಪಟ್ಟಾಧ್ಯಕ್ಷರಾದ ಶ್ರೀ ಮಳೆ ಮಲ್ಲಿಕಾರ್ಜುನ ಶಿವಾಚಾರ್ಯ ಮಹಾಸ್ವಾಮಿಗಳ ಮಾತನಾಡಿ, ಯುವ ಜನಾಂಗ ಗುರು-ಹಿರಿಯರು ತೋರಿದ ಸನ್ಮಾರ್ಗ, ಸಂಸ್ಕೃತಿ, ಆಚರಣೆ, ಸಂಪ್ರದಾಯಗಳನ್ನು ಮರೆಯಬಾರದು. ಪಾಲಕರು ಮಕ್ಕಳಿಗೆ ಬಾಲ್ಯದಲ್ಲಿಯೇ ಉತ್ತಮ ಸಂಸ್ಕಾರ ಕಲಿಸಬೇಕು ಎಂದು ಹೇಳಿದರು.

# ರೈಲು ಮಾರ್ಗ ಬದಲಾವಣೆ ಸಾರ್ವಜನಿಕರಿಗೆ ಹೊರೆ

**■ವಿಜಯಸಾಕ್ಷಿ ಸುದ್ದಿ, ಗದಗ**



ಹುಬ್ಬಳ್ಳಿ ನೈರುತ್ಯ ರೈಲ್ವೆ ಅಧಿಕಾರಿಗಳೊಂದಿಗೆ ಸಚಿವ ಎಂ.ಬಿ. ಪಾಟೀಲ ಅವರು ಸಭೆ ನಡೆಸಿ, ಸಮಯದ ಅಭಾವದ ಬಗ್ಗೆ ಚರ್ಚಿಸಿ ವಿಜಯಪುರ ರೈಲನ್ನು ಗದಗ ಬೈಪಾಸ್ ಸ್ಟೇಷನ್ ಮುಖಾಂತರ ಚಲಿಸುವಂತೆ ಆತುರದ ನಿರ್ಧಾರ ಕೈಗೊಂಡಿರುವುದು ವಿಪರ್ಯಾಸವಾಗಿದೆ ಎಂದು ಗದಗ ಜಿಲ್ಲಾ ಜೆಡಿಎಸ್ ಪ್ರಧಾನ ಕಾರ್ಯದರ್ಶಿ ಹಾಜಿಅಲಿ ಎಚ್.ಕೊಪ್ಪಳ ಅಭಿಪ್ರಾಯಪಟ್ಟಿದ್ದಾರೆ.

ಈ ಬಗ್ಗೆ ಪತ್ರಿಕಾ ಹೇಳಿಕೆ ನೀಡಿರುವ ಅವರು, ಕಾರಣ ಗದಗ ಬೈಪಾಸ್ ಊರಿನ ಆಚೆ ಇರುವ ನಿಲ್ದಾಣವಾಗಿದ್ದು, ಅಕ್ಕಪಕ್ಕದಲ್ಲಿ ಯಾವುದೇ ಮನೆ ಮತ್ತು ವಾಣಿಜ್ಯ ಮಳಿಗೆ ಹಾಗೂ ಸಮರ್ಪಕವಾದ ರಸ್ತೆ ಇಲ್ಲ. ಜನಸಾಮಾನ್ಯರು ಈ ನಿಲ್ದಾಣಕ್ಕೆ ಅಟೋ ಮೂಲಕ ರೂ. 150-200 ಕೊಟ್ಟು ಹೋಗಬೇಕು. ಇದು ಸಾಮಾನ್ಯ ಜನತೆಗೆ ಹೊರೆಯಾಗಲಿದೆ.

ಸಂಬಂಧಿಸಿದ ರೈಲ್ವೆ ಇಲಾಖೆಯವರು ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವರು ಮತ್ತು ಜಿಲ್ಲಾಧಿಕಾರಿಗಳು ಸಮಗ್ರವಾಗಿ ಪರಿಶೀಲಿಸಿ ಸದರಿ ನಿಲ್ದಾಣಕ್ಕೆ ಸಾರ್ವಜನಿಕರಿಗೆ ಹೋಗಲು ಅಚ್ಚುಕಟ್ಟಾದ ರಸ್ತೆ ವ್ಯವಸ್ಥೆಯನ್ನು ಮಾಡಿ, ನಂತರ ಸಾಧಕ-ಬಾಧಕಗಳನ್ನು ಪರಿಶೀಲಿಸಿ ರೈಲು ಪ್ರಯಾಣ ಪ್ರಾರಂಭಿಸಬೇಕು ಎಂದು ಆಗ್ರಹಿಸಿದ್ದಾರೆ.

# ಪ್ರಚೋದನಕಾರಿ ಹೇಳಿಕೆಗೆ ಅವಕಾಶವಿಲ್ಲ

**■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**



ಗಜೇಂದ್ರಗಡದಲ್ಲಿ ನಡೆದ ಅಹಿಂದ ಒಕ್ಕೂಟದ ಪ್ರತಿಭಟನಾ ಸಭೆಯಲ್ಲಿ ಶಾಸಕ ಜಿ.ಎಸ್. ಪಾಟೀಲ ಅವರು ಆಡಿದ ಮಾತುಗಳನ್ನು ಕೆಪಿಸಿಸಿ ಪ್ರಧಾನ ಕಾರ್ಯದರ್ಶಿ ಟಿ. ಈಶ್ವರ ಸಮರ್ಥಿಸಿಕೊಂಡು ಪತ್ರಿಕಾ ಹೇಳಿಕೆ ನೀಡಿರುವುದು ಸಮಂಜಸವಲ್ಲ ಎಂದು ಬಿಜೆಪಿ ಜಿಲ್ಲಾ ಕೋಶಾಧ್ಯಕ್ಷ ನಾಗರಾಜ ಕುಲಕರ್ಣಿ ಪ್ರತಿಕ್ರಿಯಿಸಿದ್ದಾರೆ.

ಈ ಕುರಿತು ಪತ್ರಿಕಾ ಹೇಳಿಕೆ ನೀಡಿರುವ ಅವರು, ಪ್ರಜಾಪ್ರಭುತ್ವದಲ್ಲಿ ಟೀಕೆಗೂ ಮತ್ತು ರಚನಾತ್ಮಕ ಸಲಹೆಗಳಿಗೂ ಅವಕಾಶವಿದೆ. ಆದರೆ ಪ್ರಚೋದನಕಾರಿ ಹೇಳಿಕೆಗೆ ಅವಕಾಶವಿಲ್ಲ. ಪ್ರಧಾನ ಮಂತ್ರಿಗಳು ಪ್ರಜಾಪ್ರಭುತ್ವದ ಮಾದರಿಯಲ್ಲಿ ಸರ್ಕಾರವನ್ನು ಸಂವಿಧಾನಬದ್ಧವಾಗಿ ರಚನೆ ಮಾಡಿದ್ದಾರೆ. ವ್ಯಕ್ತಿ ಎಷ್ಟೇ ದೊಡ್ಡವನಾಗಿದ್ದರೂ, ಅವರ ಹಿನ್ನೆಲೆ ಏನೇ ಇದ್ದರೂ ಸಾರ್ವಜನಿಕವಾಗಿ ಹೇಳಿಕೆ ಕೊಡುವಾಗ ವಿಮರ್ಶಿಸಿ ಜಾಗೃತೆ ವಹಿಸಬೇಕು. ಮುಖ್ಯಮಂತ್ರಿ ಸಿದ್ದರಾಮಯ್ಯನವರು ಮೌಲ್ಯಾಧಾರಿತ ರಾಜಕಾರಣಿ ರಾಮಕೃಷ್ಣ ಹೆಗಡೆಯವರ ಸರ್ಕಾರದಲ್ಲಿ ಇದ್ದವರು. ಆರೋಪ ಬಂದಾಗ ಹೆಗಡೆಯವರು ನಡೆದುಕೊಂಡ ರೀತಿಯನ್ನು ಅನುಸರಿಸಿ ರಾಜೀನಾಮೆ ನೀಡಿ ತನಿಖೆ ಎದುರಿಸಬೇಕಾಗಿತ್ತು ಎಂದು ಅಭಿಪ್ರಾಯಪಟ್ಟಿದ್ದಾರೆ.

# ಶಿಕ್ಷಣಕ್ಕೆ ನೀಡಿದ ದಾನ ಶ್ರೇಷ್ಠ



**■ವಿಜಯಸಾಕ್ಷಿ ಸುದ್ದಿ, ಗದಗ**

ವಿದ್ಯಾದಾನ ಶ್ರೇಷ್ಠ, ವಿದ್ಯಾದಾನಕ್ಕೆ ನೀಡಿದ ದಾನಗಳು ಕೂಡಾ ಶ್ರೇಷ್ಠವೆಂದು ಗದಗ ಶಹರ ಬಿಇಓ ಆರ್.ಎಸ್. ಬುರಡಿ ಹೇಳಿದರು.

ಅವರು ನಗದರ ರಾಜೀವಗಾಂಧಿ ಕಾಲೋನಿಯ ಸರಕಾರಿ ಹಿರಿಯ ಪ್ರಾಥಮಿಕ ಉರ್ದು ಶಾಲೆ ನಂ4ಕ್ಕೆ ಅಲ್ಮೆರಾ, ಮೈಕ್ ಸೆಟ್, ಮಕ್ಕಳ ಕಲಿಕೆಗೆ ಖುರ್ಚಿ, ಟೇಬಲ್ ಹಾಗೂ ವಿವಿಧ ಸಾಮಗ್ರಿಗಳನ್ನು ದಾನಿಗಳಿಂದ ಸ್ವೀಕರಿಸಿ ಮಾತನಾಡಿದರು.

ಸರಕಾರಿ ಶಾಲೆ ಉತ್ತಮ ಗುಣಮಟ್ಟದ ಶಿಕ್ಷಕರನ್ನು ಹೊಂದಿದೆ. ಸರಕಾರ ಹತ್ತು ಹಲವಾರು ಕಾರ್ಯಕ್ರಮಗಳ ಮೂಲಕ ಮಕ್ಕಳಿಗೆ ಮಧ್ಯಾಹ್ನದ ಬಿಸಿಯೂಟ, ಕ್ಷೀರಭಾಗ್ಯ, ಪೌಷ್ಠಿಕ ಆಹಾರ, ಉಚಿತ ಸಮವಸ್ತ್ರ ನೀಡುವ ಮೂಲಕ ಪ್ರತಿಯೊಬ್ಬರೂ ಶಿಕ್ಷಣ ಪಡೆಯುಬೇಕು ಎಂಬ ಉದ್ದೇಶ ಹೊಂದಿದೆ. ಸರಕಾರದೊಂದಿಗೆ ದಾನಿಗಳೂ ಸರಕಾರಿ ಶಾಲೆಗಳಿಗೆ ದಾನ ನೀಡುತ್ತಿರುವುದು ಅತ್ಯಂತ ಶ್ರೇಷ್ಠವಾದ ಕಾರ್ಯವಾಗಿದೆ ಎಂದರು.

ಗದಗ ಗ್ರಾಮೀಣ ಬಿಇಓ ವಿ.ವಿ. ನಡುವಿನಮನಿ ಮಾತನಾಡಿ, ಉರ್ದು ಭಾಷೆ ಅತ್ಯಂತ ಶ್ರೀಮಂತ ಬಾಷೆಯಾಗಿದೆ. ಇಂದು ಉರ್ದು ಬಾಷೆ ಕಲಿಯುವ ವಿದ್ಯಾರ್ಥಿಗಳ ಸಂಖ್ಯೆ ಗ್ಗಣನೀಯವಾಗಿ ಹೆಚ್ಚುತ್ತಿದ್ದು ಸರಕಾರಿ ಶಾಲೆಗಳ ಅಭಿವೃದ್ಧಿಗೆ ಸಮುದಾಯ ಕೈಜೊಡಿಸುತ್ತಿರುವುದು ಶ್ಲಾಘನೀಯ ಎಂದರು.

ಎಸ್‌ಡಿಎಂಸಿ ಅಧ್ಯಕ್ಷ ಅಮೀನಸಾಬ ಹುಡೆದಮನಿ, ಶಾಲಾ ಪ್ರಧಾನ ಗುರುಮಾತೆ ಖೈರುನಿಸಾ.ದಾವಲಾಖ, ಅಕ್ಷರದಾಸೋಹ ಅಧಿಕಾರಿ ಶಂಕರ ಹಡಗಲಿ, ಸಿಆರ್‌ಪಿ ಖಲೀಲ ಜಲಿಗೇರಿ, ಕವಿತಾ ದಂಡಿನ, ಶಿಲ್ಪಾ ಹಳ್ಳಿಕೇರಿ, ನಜಮಾ ಹುಡೆದಮನಿ, ಖವಾಸ, ನಶೀಮಾ ಜಕ್ಕಲಿ, ಹಲೀಮಾ ಶೇಖ, ಖುಖುನಾ ಬಳ್ಳಾರಿ, ಹಸೀನಾ ಮಕಾಂದಾರ, ಇಮಾಮಸಾಬ ಗಾಡಗೋಳಿ ಇದ್ದರು.

# ಸಾಹಿತ್ಯಕ್ಕೆ ಅಜ್ಞಾನ ಕಳೆಯುವ ಶಕ್ತಿಯಿದೆ

**■ವಿಜಯಸಾಕ್ಷಿ ಸುದ್ದಿ, ಹರಪನಹಳ್ಳಿ**




ಸಮಾಜದಲ್ಲಿ ಅಡಗಿರುವ ಮೌಢ್ಯತೆಯನ್ನು ತೊಳೆಯುವಲ್ಲಿ ವಚನ ಸಾಹಿತ್ಯವು ಪ್ರಮುಖ ಪಾತ್ರ ವಹಿಸುತ್ತಿದೆ ಎಂದು ವಿಜಯನಗರ ಶರಣ ಸಾಹಿತ್ಯ ಪರಿಷತ್ ಜಿಲ್ಲಾಧ್ಯಕ್ಷ ಕೆ. ರವೀಂದ್ರನಾಥ ತಿಳಿಸಿದರು.

ಪಟ್ಟಣದ ಕಾಶಿಮಠದಲ್ಲಿ ಅಖಿಲ ಭಾರತ ಶರಣ ಸಾಹಿತ್ಯ ಪರಿಷತ್ ತಾಲೂಕು ಘಟಕದ ವತಿಯಿಂದ ನಡೆದ ಶರಣ ಸಾಹಿತ್ಯ ಪರಿಷತ್ ಸಂಸ್ಥಾಪನಾ ದಿನಾಚರಣೆ ಮತ್ತು ದತ್ತಿ ಉಪನ್ಯಾಸ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಪ್ರತಿಯೊಬ್ಬರಲ್ಲಿ ವಚನ ಸಾಹಿತ್ಯದದ ಬಗೆಗೆ ಆಸಕ್ತಿ ಬರುವಂತೆ ಮಾಡುವುದು ವಚನಾಕಾರರ ಕರ್ತವ್ಯ. ಸಮಾಜದಲ್ಲಿ ಅಡಗಿರುವ ಸಮಸ್ಯೆಗಳನ್ನು ಸಾಹಿತ್ಯದ ರೂಪದಲ್ಲಿ ಪ್ರಚುರಪಡಿಸಿಬೇಕು. ವ್ಯಕ್ತಿಯ ಅಜ್ಞಾನವನ್ನು ಕಳಚುವ ಶಕ್ತಿ ಸಾಹಿತ್ಯಕ್ಕಿದೆ ಎಂದು ತಿಳಿಸಿದರು.

ನಿವೃತ್ತ ಪ್ರಾಧ್ಯಾಪಕ ಎಸ್. ಶಿವಾನಂದ ಮಾತನಾಡಿ, ಆಹಾರವೊಂದು ಅದ್ಭುತ ಸಾಧನ. ಅದನ್ನು ದೇಹಕ್ಕೆ ಬೇಕಾದಷ್ಟು ಮಾತ್ರ ತೆಗೆದುಕೊಳ್ಳಬೇಕು. ಮನುಷ್ಯನಲ್ಲಿ ನಿರಹಂಕಾರದ ಭಾವನೆ ಬಂದಲ್ಲಿ ಬೆಳವಣಿಗೆ ಕುಂಠಿತವಾಗುತ್ತದೆ. ನಮ್ಮನ್ನು ನಾವು ಅರಿತುಕೊಳ್ಳುವುದು ಮುಖ್ಯ ಎಂದರು.

ಹಿರಿಶಾಂತವೀರ ಮಹಾಸ್ವಾಮಿಗಳು ಶಾಖಾ ಗವಿಮಠ ಹಡಗಲಿ, ಅಖಿಲ ಭಾರತ ಶರಣ ಸಾಹಿತ್ಯ ಪರಿಷತ್ ತಾಲೂಕು ಘಟಕದ ಅಧ್ಯಕ್ಷ ಷಣ್ಮುಖಪ್ಪ ಪೂಜಾರ್, ಕೊಟ್ರಮ್ಮ ದಿವಾಕರ್, ವಿಜಯ್ ಕುಮಾರ್, ಬಣಕಾರ ರಾಜಶೇಖರ ಪ್ರಧಾನ ಕರ್ಯದರ್ಶಿ, ವೀರಶೈವ ಮಹಾಸಭಾ ತಾಲೂಕು ಅಧ್ಯಕ್ಷ ಎಂ. ರಾಜಶೇಖರ್, ಪುಷ್ಪಾ ದಿವಾಕರ್, ಪಾಟೀಲ್ ಬೆಟ್ಟನಗೌಡ, ಎಂ.ಟಿ. ಸುಭಾಶ್ಚಂದ್ರ, ಕೆ.ಎಂ. ಶಿವಾನಂದಯ್ಯ, ಹರಪನಹಳ್ಳಿ ಮಂಜುನಾಥ ಹಾಗೂ ಇತರರಿದ್ದರು.

# ರಣತೂರ ಶಾಲೆಯಲ್ಲಿ ಪ್ರತಿಭಾ ಕಾರಂಜಿ



**■ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ**

ಛಬ್ಬಿ ಕ್ಲಸ್ಟರ್ ಮಟ್ಟದ ಪ್ರಾಥಮಿಕ ಶಾಲೆಗಳ ಪ್ರತಿಭಾ ಕಾರಂಜಿ ಕಾರ್ಯಕ್ರಮ ರಣತೂರ ಗ್ರಾಮದ ಸರಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಶುಕ್ರವಾರ ನಡೆಯಿತು.

ಅಧ್ಯಕ್ಷತೆಯನ್ನು ಎಸ್‌ಡಿಎಂಸಿ ಅಧ್ಯಕ್ಷ ಮಹದೇವಪ್ಪ ಡಂಬಳ ವಹಿಸಿದ್ದರು. ಉದ್ಘಾಟನೆಯನ್ನು ಬಿಇಓ ಎನ್.ನಾಯಕ ನೆರವೇರಿಸಿದರು. ಕ್ಲಸ್ಟರ್ ಸಿಆರ್‌ಪಿ ಗೀತಾ ಸರವಿ ಪ್ರಾಸ್ತಾವಿಕವಾಗಿ ಮಾತನಾಡಿದರು. ತಾಲೂಕಾ ಸರಕಾರಿ ನೌಕರರ ಸಂಘದ ಅಧ್ಯಕ್ಷ ಶರಣಬಸವ ಪಾಟೀಲ, ಈಶ್ವರ ಮೆಡ್ಲೇರಿ, ಗ್ರಾ.ಪಂ ಅಧ್ಯಕ್ಷೆ ವಿಜಯಲಕ್ಷ್ಮೀ ಚವ್ಹಾಣ, ಉಪಾಧ್ಯಕ್ಷ ಸಂತೋಷ ಓಬಾಜಿ, ಸದಸ್ಯರಾದ ಅಶೋಕ ಬಳ್ಳಾರಿ, ಶರೀಫಸಾಬ ಛಬ್ಬಿ, ಸುರೇಶ ಸಣ್ಣತಂಗಿ, ಐ.ಆರ್. ಪರಬತ ಮುಂತಾದವರು ಉಪಸ್ಥಿತರಿದ್ದರು.

# ಹನುಮಂತನ ಯುಕ್ತಿ, ಬಲ ಅರಿಯಿರಿ



**■ವಿಜಯಸಾಕ್ಷಿ ಸುದ್ದಿ, ನರೇಗಲ್**

ಹನುಮಂತ ಅತ್ಯಂತ ಬಲಶಾಲಿ. ಅವನಲ್ಲಿ ಯುಕ್ತಿ ಮತ್ತು ಬಲಗಳೆರಡೂ ಮೇಳೈಸಿದ್ದರಿಂದ ಆತ ಶ್ರೀರಾಮನಿಗೆ ಸಕಾಲದಲ್ಲಿ ಸಹಾಯ ಮಾಡಲು ಸಾಧ್ಯವಾಯಿತು. ಆದ್ದರಿಂದ ನಾವೆಲ್ಲರೂ ಹನುಮಂತನ ಬಲ ಮತ್ತು ಯುಕ್ತಿಯನ್ನು ತಿಳಿದರಬೇಕಾದ ಅಗತ್ಯವಿದೆ ಎಂದು ನಿವೃತ್ತ ಮುಖ್ಯ ಶಿಕ್ಷಕ ಅರುಣ ಬಿ.ಕುಲಕರ್ಣಿ ಹೇಳಿದರು.

ಪಟ್ಟಣದ ಶ್ರೀ ದತ್ತಾತ್ರೇಯ ದೇವಸ್ಥಾನದಲ್ಲಿ ಜರುಗಿದ ಹನುಮಾನ ಚಾಲೀಸಾ ಸತ್ಸಂಗದಲ್ಲಿ ಅವರು ಮಾತನಾಡಿದರು.

ರಾಮಾಯಣದಲ್ಲಿನ ಒಂದೊಂದು ಪಾತ್ರವೂ ನಮ್ಮ ನಿತ್ಯ ಜೀವನಕ್ಕೆ ಅತ್ಯಂತ ಹತ್ತಿರವಾಗಿವೆ. ಮನೆಯಲ್ಲಿ ಮಕ್ಕಳಿಗೆ ರಾಮಾಯಣ ಮತ್ತು ಮಹಾಭಾರತದ ಕಥೆಗಳನ್ನು ಹೇಳುವತ್ತ ಗಮನ ಹರಿಸಬೇಕು. ಈ ಮೂಲಕ ಮಕ್ಕಳಲ್ಲಿ ನಮ್ಮ ಭಾರತದ ಸನಾತನ ಧರ್ಮ, ಸಂಸ್ಕೃತಿಯನ್ನು ಬಿತ್ತಲು ಮುಂದಾಗಬೇಕೆಂದು ಕುಲಕರ್ಣಿ ಹೇಳಿದರು.

ಸತ್ಸಂಗದಲ್ಲಿ ಹಿರಿಯರಾದ ಶೇಷಗಿರಿ ಕುಲಕರ್ಣಿ, ಎ.ಜಿ. ಕುಲಕರ್ಣಿ, ಆನಂದ ಕಾಳೆ, ಎಸ್.ಎಚ್. ಕುಲಕರ್ಣಿ, ಬಾಬು ಕಾಳೆ, ಗುರುರಾಜ ಕುಲಕರ್ಣಿ, ರಾಮಕೃಷ್ಣ ಸದರಜೋಷಿ, ಅಜಿತ ಕುಲಕರ್ಣಿ, ಲಕ್ಷ್ಮೀ ಗ್ರಾಮಪುರೋಹಿತ, ಜಯಶ್ರೀ ಗ್ರಾಮಪುರೋಹಿತ, ಪ್ರತೀಕ್ಷಾ ಕುಲಕರ್ಣಿ, ಪ್ರಿಯಾ ಕುಲಕರ್ಣಿ, ಸನ್ಮತಿ ಸದರಜೋಷಿ, ಪಲ್ಲವಿ ಗ್ರಾಮಪುರೋಹಿತ ಮತ್ತಿತರರಿದ್ದರು.

# ರೈತ ಆತ್ಮಹತ್ಯೆಗೆ ಶರಣು


**■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಪಟ್ಟಣದ ರೈತ ಶಂಕರಪ್ಪ ರಾಮಣ್ಣ ಗೋಡಿ (50) ಸಾಲಬಾಧೆಗೆ ಮನನೊಂದು ಶುಕ್ರವಾರ ನೇಣಿಗೆ ಶರಣರಾಗಿದ್ದಾರೆ. ಪಟ್ಟಣದ ಬೆಣ್ಣಿಪೇಟೆಯ ನಿವಾಸಿಯಾಗಿದ್ದ ಇವರು ತಮ್ಮ ಜಮೀನಿನಲ್ಲಿ ಬೆಳೆದಿದ್ದ ಬೆಳೆಗಳು ಅತಿವೃಷ್ಟಿಯಿಂದಾಗಿ ಹಾಳಾಗಿದ್ದರಿಂದ ಮನನೊಂದಿದ್ದರು.

ಜಮೀನಿನ ಮೇಲೆ ಮಾಡಿದ್ದ ಬೆಳೆಸಾಲ ತೀರಿಸುವುದು ಹೇಗೆಂಬ ಆತಂಕದಿಂದ ಆತ್ಮಹತ್ಯೆ ಮಾಡಿಕೊಂಡಿದ್ದಾರೆ. ಈ ಕುರಿತು ಲಕ್ಷ್ಮೇಶ್ವರ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

# ನಿಧನ ವಾರ್ತೆ

## ಸುಶೀಲಾಬಾಯಿ ಬಾಬಾಸಾ ಖಟವಟೆ




**ಗದಗ:** ಗದಗ ನಗರದ ಮಕಾನಗಲ್ಲಿಯಲ್ಲಿರುವ ಶ್ರೀ ಜಗದಂಬಾ ಶಿಕ್ಷಣ ಸಂಸ್ಥೆಯ ಚೇರಮನ್ ಅನಿಲ ಬಾಬಾಸಾ ಖಟವಟೆ ಅವರ ಮಾತೋಶ್ರೀ ಶ್ರೀಮತಿ ಸುಶೀಲಾಬಾಯಿ ಬಾಬಾಸಾ ಖಟವಟೆ ತಮ್ಮ 77ನೇ ವಯಸ್ಸಿನಲ್ಲಿ ಗುರುವಾರ ನಿಧನರಾದರು. ಮೃತರು ಪುತ್ರ, ಇಬ್ಬರು ಪುತ್ರಿಯರು, ಸೊಸೆ, ಮೊಮ್ಮಕ್ಕಳು ಸೇರಿದಂತೆ ಅಪಾರ ಬಂಧು-ಬಳಗವನ್ನು ಅಗಲಿದ್ದಾರೆ.

ಎಸ್.ಎಸ್.ಕೆ. ಸಮಾಜದ ಹಿರಿಯರಾದ ಸುಶೀಲಾಬಾಯಿ ಖಟವಟೆ ಅವರ ನಿಧನಕ್ಕೆ ಗದಗ ಎಸ್.ಎಸ್.ಕೆ. ಸಮಾಜದ ಪಂಚ ಕಮಿಟಿ, ತರುಣ ಸಂಘ, ಸಮಾಜದ ಬಾಂಧವರು ಸಂತಾಪ ಸೂಚಿಸಿದ್ದಾರೆ.

# ಅಮೃತ ಭೋಜನ ಕಾರ್ಯ ಶ್ಲಾಘನೀಯ

**■ವಿಜಯಸಾಕ್ಷಿ ಸುದ್ದಿ, ನರೇಗಲ್**



ಶ್ರಾವಣ ಮಾಸದ ಒಂದು ತಿಂಗಳು ಸರ್ಕಾರಿ ಶಾಲೆಯ ವಿದ್ಯಾರ್ಥಿಗಳಿಗೆ ಪ್ರತಿನಿತ್ಯ ಅಮೃತ ಭೋಜನ ಮಾಡುತ್ತಿರುವ ಈ ಶಾಲೆಯ ಶಿಕ್ಷಕರ ಕಾರ್ಯ ಶ್ಲಾಘನೀಯ ಎಂದು ಗದಗನ ಹರಿಣಿ ವಿವಿಧೋದ್ದೇಶ ಮಹಿಳಾ ಸಂಘದ ಅಧ್ಯಕ್ಷೆ ನಿರ್ಮಲಾ ಸೂಡಿ ಹೇಳಿದರು.

ಪಟ್ಟಣದ ಕೆಜಿಎಂಎಸ್ ಸರ್ಕಾರಿ ಶಾಲೆಯಲ್ಲಿ ಶ್ರಾವಣ ಮಾಸದ ನಿಮಿತ್ತ ಅಮೃತ ಭೋಜನದಲ್ಲಿ ವಿದ್ಯಾರ್ಥಿಗಳಿಗೆ ಸಿಹಿ ಊಟವನ್ನು ನೀಡಿ ಅವರು ಮಾತನಾಡಿದರು.

ಇಂತಹ ಕಾರ್ಯಕ್ರಮಗಳನ್ನು ಹಮ್ಮಿಕೊಂಡು ಮಕ್ಕಳಿಗೆ ಪೋಷಕಾಂಶಗಳ ಕೊರತೆ ಆಗದಂತೆ ನೋಡಿಕೊಳ್ಳುವದು ಮತ್ತು ಬಡ ಮಕ್ಕಳಿಗೆ ಬಿಸಿ ಊಟದ ಜೊತೆಗೆ ಶ್ರಾವಣ ಮಾಸದಲ್ಲಿ ಪ್ರತಿ ದಿನ ಒಬ್ಬ ದಾನಿಗಳ ಮೂಲಕ ಸಿಹಿ ಊಟ ನೀಡುವ ಈ ಶ್ರಾವಣ ಮಾಸದ ಅಮೃತ ಭೋಜನ ಕಾರ್ಯಕ್ರಮ ಅತ್ಯುತ್ತಮವಾಗಿದೆ. ಸರ್ಕಾರಿ ಶಾಲೆಯಲ್ಲಿ ಸುಮಾರು ಶೇ.80ರಷ್ಟು ಬಡ ಮಕ್ಕಳು ಇದ್ದಾರೆ. ಅಂತಹ ಮಕ್ಕಳ ದೇಹ ಸದೃಢಗೊಳ್ಳಲು ಇದು ಸಹಾಯವಾಗಿದೆ. ಈ ಕಾರ್ಯ ನಿರಂತರವಾಗಿ ಪತ್ರಿ ವರ್ಷ ಯಶಸ್ವಿ ಆಗಲಿ ಎಂದರು.

ಅಮೃತ ಭೋಜನ ವ್ಯವಸ್ಥೆ ಮಾಡಿಸಿದ ಗದಗನ ಹರಿಣಿ ವಿವಿಧೋದ್ದೇಶ ಮಹಿಳಾ ಸಂಘದವರಿಗೆ ಶಾಲೆಯ ವತಿಯಿಂದ ಸನ್ಮಾನ ಜರುಗಿ-ತು. ಸಂಘದ ಸದಸ್ಯರಾದ ಅಶ್ವಿನಿ ಸಂಶಿಮಠ, ಲಲಿತಾ ಹಿರೇಮನಿ, ಸುನೀಲ ವಸ್ತ್ರದ, ಮುಖ್ಯ ಶಿಕ್ಷಕ ಬಸವರಾಜ ಕುರಿ, ಎನ್.ಎಲ್. ಚವ್ಹಾಣ, ಎಂ.ಪಿ. ಅಣಗೌಡರ, ಡಿ.ವಿ. ಕಳ್ಳಿ, ಜೆ.ಎ. ಪಾಟೀಲ, ಎಂ.ಎಸ್. ಮಾಳಶೆಟ್ಟಿ, ಎಸ್.ಐ. ಜಗಾಪೂರ, ರಾಜೇಶ್ವರಿ ತೊಂಡಿಹಾಳ, ಎಚ್. ಎಫ್. ಕಡ್ಲಿಮಟ್ಟಿ, ಬಿ.ಡಿ. ಹಳ್ಳದಮನಿ ಸೇರಿದಂತೆ ಇತರರಿದ್ದರು.

# ಶಾಸಕ ಯತ್ನಾಳ್ ವಿರುದ್ಧ ಕ್ರಿಮಿನಲ್ ಪ್ರಕರಣ ದಾಖಲಿಸಲು ನಿರ್ದೇಶಿಸಿದ ಕೋರ್ಟ್

**■ವಿಜಯಸಾಕ್ಷಿ ಸುದ್ದಿ, ಬೆಂಗಳೂರು**



ಆರೋಗ್ಯ ಸಚಿವ ದಿನೇಶ್ ಗುಂಡೂರಾವ್ ಅವರ ಪತ್ನಿ ತಬು ರಾವ್ (ತಬಸ್ಸುಮ್ ದಿನೇಶ್ ರಾವ್) ದಾಖಲಿಸಿದ್ದ ಖಾಸಗಿ ದೂರು ವಿಚಾರಣೆ ನಡೆಸಿದ ಬೆಂಗಳೂರಿನ ಜನ ಪ್ರತಿನಿಧಿಗಳ ನ್ಯಾಯಾಲಯ, ಬಿಜೆಪಿ ಶಾಸಕ ಬಸನಗೌಡ ಪಾಟೀಲ್ ಯತ್ನಾಳ್ ವಿರುದ್ಧ ಕ್ರಿಮಿನಲ್ ಮಾನನಷ್ಟ ಮೊಕದ್ದಮೆ ದಾಖಲಿಸಲು ನಿರ್ದೇಶಿಸಿದೆ ಎಂದು ವರದಿಯಾಗಿದೆ.

ಲೋಕಸಭೆ ಚುನಾವಣೆಯ ಸಂದರ್ಭ ಏಪ್ರಿಲ್ 4ರಂದು ವಿಜಯಪುರದಲ್ಲಿ ಮಾಧ್ಯಮಗಳೊಂದಿಗೆ ಮಾತನಾಡಿದ್ದ ಯತ್ನಾಳ್ "ಹೆಚ್ಚು ಕಡಿಮೆ ಗುಂಡೂರಾವ್ ಅವರ ಮನೆಯಲ್ಲಿ ಅರ್ಧ ಪಾಕಿಸ್ತಾನ ಇದೆ. ದೇಶದ ವಿರುದ್ದ ಹೇಳಿಕೆ ಕೊಡುವುದು ಗುಂಡೂರಾವ್‌ಗೆ ಚಟ ಆಗಿಬಿಟ್ಟಿದೆ" ಎಂದಿದ್ದರು.

ಯತ್ನಾಳ್ ಹೇಳಿಕೆಯ ವಿರುದ್ದ ತಬು ರಾವ್ ಬೆಂಗಳೂರಿನ ಸಂಜಯ್ ನಗರ ಪೊಲೀಸ್ ಠಾಣೆಯಲ್ಲಿ ದೂರು ದಾಖಲಿಸಿದ್ದರು. ಅಲ್ಲದೆ, ಪತ್ರಿಕಾ ವರದಿಗಳು ಸೇರಿದಂತೆ ಹಲವು ಸಾಕ್ಷಿಗಳನ್ನು ನ್ಯಾಯಾಲಯಕ್ಕೆ ಸಲ್ಲಿಸಿದ್ದರು. ಅದನ್ನು ಪರಿಗಣಿಸಿದ ನ್ಯಾಯಾಲಯ ಯತ್ನಾಳ್‌ಗೆ ಸಮನ್ಸ್ ಜಾರಿಗೊಳಿಸಿದೆ ಎಂದು ತಿಳಿದು ಬಂದಿದೆ. ಯತ್ನಾಳ್ ವಿರುದ್ದ ಭಾರತೀಯ ದಂಡ ಸಂಹಿತೆಯ ಸೆಕ್ಷನ್ 499 ಮತ್ತು 500 (ಮಾನನಷ್ಟ) ಅಡಿ ಪ್ರಕರಣ ದಾಖಲಿಸಲು ತಬು ರಾವ್ ಕೋರಿದ್ದರು.

# ಎನಿವೇರ್ ನೋಂದಣಿಯ ಸದುಪಯೋಗಪಡಿಸಿಕೊಳ್ಳಿ

■ವಿಜಯಸಾಕ್ಷಿ ಸುದ್ದಿ, ಗದಗ



ರಾಜ್ಯ ಸರ್ಕಾರದ 2024-2 ನೇ ಸಾಲಿನ ಆಯವ್ಯಯ ಭಾಷಣದಲ್ಲಿ ಎನಿವೇರ್ ನೋಂದಣಿ ವ್ಯವಸ್ಥೆಯನ್ನು ರಾಜ್ಯದ ಎಲ್ಲ ಜಿಲ್ಲೆಗಳಿಗೂ ವಿಸ್ತರಿಸಲಾಗುವುದೆಂದು ಘೋಷಿಸಲಾಗಿದೆ. ಈ ವ್ಯವಸ್ಥೆಯನ್ನು ಬೆಂಗಳೂರು ನಗರ ಜಿಲ್ಲೆಯಲ್ಲಿ 2011ರಲ್ಲಿ ಹಾಗೂ ತುಮಕೂರು ಹಾಗೂ ಬೆಳಗಾವಿ ಜಿಲ್ಲೆಗಳಲ್ಲಿ ಮಾರ್ಚ್ 2024ರಲ್ಲಿ ಅನುಷ್ಠಾನಗೊಳಿಸಲಾಗಿದೆ. ಎನಿವೇರ್ ನೊಂದಣಿ ವ್ಯವಸ್ಥೆಯು ಈ ಜಿಲ್ಲೆಗಳಲ್ಲಿ ಯಶಸ್ವಿಯಾಗಿ ಕಾರ್ಯನಿರ್ವಹಿಸುತ್ತಿದೆ. ಇದೀಗ ಗದಗ ಜಿಲ್ಲೆಯ ಉಪನೊಂದಣಿ ಕಚೇರಿಗಳಿಗೂ ಎನಿವೇರ್ ನೋಂದಣಿಯನ್ನು ವಿಸ್ತರಿಸಲು ನಿರ್ಧರಿಸಲಾಗಿದೆ.

ಪ್ರಸ್ತುತ ಸಾರ್ವಜನಿಕರು ಸ್ಥಿರಾಸ್ತಿ ಇರುವ ವ್ಯಾಪ್ತಿಯ ಉಪನೋಂದಣಿ ಕಚೇರಿಯಲ್ಲಿ ಮಾತ್ರ ದಸ್ತಾವೇಜನ್ನು ನೋಂದಣಿ ಮಾಡಲು ಅವಕಾಶವಿದ್ದು, ಎನಿವೇರ್ ನೋಂದಣಿಯಲ್ಲಿ ದಸ್ತಾವೇಜನ್ನು ಸ್ಥಿರಾಸ್ತಿ ಇರುವ ಜಿಲ್ಲೆಯ ಯಾವುದಾದರೂ ಉಪನೋಂದಣಿ ಕಚೇರಿಯಲ್ಲಿ ನೋಂದಾಯಿಸಿಕೊಳ್ಳಬಹುದಾಗಿದೆ.

ಎನಿವೇರ್ ನೋಂದಣಿ ವ್ಯವಸ್ಥೆಯು ಸಾರ್ವಜನಿಕರಿಗೆ ಹಲವಾರು ರೀತಿಯಲ್ಲಿ ಉಪಯುಕ್ತವಾಗಿದ್ದು, ದಾಸ್ತಾವೇಜಿನ ನೋಂದಣಿಯಲ್ಲಿ ಪಾರದರ್ಶಕತೆಯನ್ನು ಹೆಚ್ಚಿಸುತ್ತದೆ. ನೋಂದಣಿಯಲ್ಲಿ ವಿಳಂಬವನ್ನು ತಡೆಗಟ್ಟುತ್ತದೆ. ಸಾರ್ವಜನಿಕರು ಸಮೀಪದಲ್ಲಿರುವ ಉಪನೋಂದಣಿ ಕಚೇರಿಯಲ್ಲಿ ದಾಸ್ತಾವೇಜನ್ನು ನೋಂದಾಯಿಸಬಹುದು. ಸ್ಲಾಟ್ ಲಭ್ಯವಿರುವ ಕಚೇರಿಯನ್ನು ನೋಂದಣಿಗೆ ಆಯ್ಕೆ ಮಾಡಿಕೊಳ್ಳಬಹುದು. ನೋಂದಣಿ ಪ್ರಕ್ರಿಯೆ ಸುಲಭವಾಗುವುದಲ್ಲದೇ ಸಮಯವೂ ಉಳಿಯುತ್ತದೆ. ಉಪನೋಂದಣಿ ಕಚೇರಿಗಳಲ್ಲಿ ಜನದಟ್ಟಣೆ ಕಡಿಮೆಯಾಗುತ್ತದೆ ಹಾಗೂ ಕಚೇರಿಗಳಲ್ಲಿ ನೋಂದಣಿ ಕೆಲಸ ಸಮಾನವಾಗಿ ಹಂಚಿಕೆಯಾಗುತ್ತದೆ.

ಸಾರ್ವಜನಿಕರು ಎನಿವೇರ್ ನೊಂದಣಿಯ ಸದುಪಯೋಗಪಡಿಸಿಕೊಂಡು ತಮಗೆ ಹತ್ತಿರದ ಅಥವಾ ನೋಂದಣಿಗೆ ಸ್ಲಾಟ್ ಲಭ್ಯವಿರುವ ಕಚೇರಿ ಆಯ್ಕೆ ಮಾಡಿಕೊಂಡು ದಾಸ್ತಾವೇಜನ್ನು ನೋಂದಾಯಿಸಿಕೊಳ್ಳಬಹುದಾಗಿದೆ ಎಂದು ಜಿಲ್ಲಾಧಿಕಾರಿ ಗೋವಿಂದರೆಡ್ಡಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

**ಅಂಚೆ ಜನಸಂಪರ್ಕ ಅಭಿಯಾನದಲ್ಲಿ ಗೋಣಿಬಸಪ್ಪ ಕೊರ್ಲಹಳ್ಳಿ ಅಭಿಮತ**

# ಅಂಚೆ ಇಲಾಖೆಯನ್ನು ಸಶಕ್ತಗೊಳಿಸೋಣ

■ವಿಜಯಸಾಕ್ಷಿ ಸುದ್ದಿ, ಡಂಬಳ

ಸ್ವಾತಂತ್ರ್ಯಾನಂತರದಲ್ಲಿಯೂ ಜನಸಾಮಾನ್ಯರ ಹಿತಕ್ಕಾಗಿ, ನಿರಂತರವಾಗಿ, ಭ್ರಷ್ಟಮುಕ್ತವಾಗಿ ಕರ್ತವ್ಯ ನಿರ್ವಹಿಸುತ್ತಿರುವ ಇಲಾಖೆ ಎಂದರೆ ಅಂಚೆ ಇಲಾಖೆಯಾಗಿದೆ ಎಂದು ಗೋಣಿಬಸಪ್ಪ ಕೊರ್ಲಹಳ್ಳಿ ಹೇಳಿದರು.

ಡಂಬಳ ಗ್ರಾಮದ ವೀರಭದ್ರೇಶ್ವರ ಕಲ್ಯಾಣ ಮಂಟಪದಲ್ಲಿ ಅಂಚೆ ಜನಸಂಪರ್ಕ ಅಭಿಯಾನ ಕಾರ್ಯಕ್ರಮವನ್ನು ಉದ್ಘಾಟಿಸಿ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ರಾಜ್ಯ, ಕೇಂದ್ರ ಸರಕಾರಗಳ ಸೇವೆಯನ್ನು ಜನತೆಗೆ ಉತ್ತಮವಾಗಿ ತಲಿಪಿಸುವ ಕೆಲಸವನ್ನು ಮಾಡುತ್ತಾ ಬರುತ್ತಿರುವ ಈ ಇಲಾಖೆಯಡಿ ನಾವೆಲ್ಲರೂ ಖಾತೆಗಳನ್ನು ಹೊಂದುವುದರ ಮೂಲಕ ಅಂಚೆ ಇಲಾಖೆಯನ್ನು ಶ್ರೀಮಂತಗೊಳಿಸೋಣ. ಅಂಚೆ ಇಲಾಖೆ ಬಹುತೇಕ ಗ್ರಾಮೀಣ ಭಾಗಗಳಲ್ಲಿ ಖಾಸಗಿ ಕಟ್ಟಡಗಳಲ್ಲಿಯೇ ಸೇವೆ ಸಲ್ಲಿಸುತ್ತಿದ್ದು, ಸರಕಾರಗಳು ಸ್ವಂತ ಕಟ್ಟಡ ಒದಗಿಸಲು ಮುಂದಾಗಲಿ ಎಂದು ಹೇಳಿದರು.

ಗದಗ ಅಂಚೆ ಬ್ರ್ಯಾಂಚ್‌ನ ಉಪ ಅಂಚೆ ಅಧೀಕ್ಷಕ ಶ್ರೀಕಾಂತ ಜಾದವ ಮಾತನಾಡಿ, ಅಂಚೆ ಇಲಾಖೆ ಜನರ ಜೀವನಾಡಿಯಾಗಿ ಒಂದು ಪ್ರದೇಶದಿಂದ ಮತ್ತೊಂದು ಪ್ರದೇಶಕ್ಕೆ ಸಂದೇಶವನ್ನು ರವಾನಿಸುವ ಕೊಂಡಿಯಾಗಿ ಕಾರ್ಯ ನಿರ್ವಹಿಸುತ್ತಿದೆ. ಇಂದು ಕೇಂದ್ರ, ರಾಜ್ಯ ಸರ್ಕಾರ ಅಂಚೆ ಕಚೇರಿಯ ಮೂಲಕ ಹೊಸ ಹೊಸ ಯೋಜನೆಗಳನ್ನು ಜಾರಿಗೆ ತಂದು, ಜನರಿಗೆ ತಲುಪಿಸುವ ಕಾರ್ಯ ಮಾಡುತ್ತಿದೆ. ಸಾರ್ವಜನಿಕರು ಇದರ ಸದುಪಯೋಗವನ್ನು ಪಡೆದುಕೊಳ್ಳಬೇಕು ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಅಂಚೆ ಅಧಿಕಾರಿ ರವಿ ಜಾಧವ, ನಾಗರಾಜ, ಖ್ಯಾತ ಜಾನಪದ ಕಲಾವಿದ ಹುಲಗಪ್ಪ ಜೋಂಡಿ, ಡಂಬಳ ಅಂಚೆ ಇಲಾಖೆ ಪೋಸ್ಟ ಮಾಸ್ಟರ್ ಎಚ್.ಆರ್. ಮುಳಗುಂದ, ಅಂಚೆ ಸಿಬ್ಬಂದಿಗಳಾದ ಸಂಗೀತಾ ಚಲವಾದಿ, ಸುಜಾತಾ ಸುಗುರ, ಬಿ.ಎಫ್. ಕಂಪ್ಲಿ, ಎಚ್.ಎಮ್. ಜಕ್ಲಿ, ವಾಯ್.ಎಸ್. ಕುಂಬಾರ್, ಎಸ್.ಎಮ್. ಗೋವಿನಕೊಪ್ಪ, ಗ್ರಾಮದ ಹಿರಿಯರು, ಮಹಿಳೆಯರು ಇದ್ದರು.

ಐಪಿಪಿಬಿ ವ್ಯವಸ್ಥಾಪಕ ಶಿವರಾಜ ಮಾತನಾಡಿ, ಸರಕಾರಗಳ ಉತ್ತಮ ಯೋಜನೆಗಳನ್ನು ಅಂಚೆ ಇಲಾಖೆಯಲ್ಲಿ ಹಮ್ಮಿಕೊಂಡಿದ್ದು, ಈ ಸೇವೆಗಳನ್ನು ಮನೆಯ ಬಾಗಿಲಿಗೆ ಕೊಂಡೊಯ್ಯುವುದರ ಜೊತೆಗೆ ಉಳಿತಾಯ ಖಾತೆ ತೆರೆಯುವಿಕೆ, ಐಪಿಬಿಪಿ ಖಾತೆ ತೆರೆಯುವಿಕೆ, ಆಧಾರ್ ನೋಂದಣಿ-ತಿದ್ದುಪಡಿ, ಮೈ ಸ್ಟಾಂಪ್ ಮೈಲ್ಸ್, ಅಂಚೆ ಜೀವ ವಿಮೆ, ಹೆಣ್ಣುಮಕ್ಕಳಿಗಾಗಿ ಸುಕನ್ಯಾ ಸಮೃದ್ಧಿ ಯೋಜನೆಗಳಂತಹ ಅನೇಕ ಯೋಜನೆಗಳನ್ನು ಜಾರಿಗೆ ತಂದಿರುವ ಕಾರಣ ಸಾರ್ವಜನಕರು ಅಂಚೆ ಇಲಾಖೆಯೊಂದಿಗೆ ಕೈ ಜೋಡಿಸಿ ಭವಿಷ್ಯ ಜೀವನಕ್ಕೆ ಬಲ ತುಂಬಿಕೊಳ್ಳಬೇಕು ಎಂದು ಹೇಳಿದರು.

# ಚೌಕಿ ಬಸವೇಶ್ವರ ಜಾತ್ರೆ ಸೆ.2ಕ್ಕೆ

■ವಿಜಯಸಾಕ್ಷಿ ಸುದ್ದಿ,

ಇಲ್ಲಿಯ ತಿಮ್ಮಾಪೂರ ಗ್ರಾಮದಲ್ಲಿ ಶ್ರಾವಣ ಮಾಸದ ಕೊನೆಯ ಸೋಮವಾರ, ಸೆಪ್ಟೆಂಬರ್ 2ರಂದು ಶ್ರೀ ಚೌಕಿ ಬಸವೇಶ್ವರ ಜಾತ್ರಾ ಮಹೋತ್ಸವ ನಡೆಯಲಿದೆ.

ಜಾತ್ರಾ ಮಹೋತ್ಸವದ ಪ್ರಯುಕ್ತ ಬೆಳಿಗ್ಗೆ ಪಂಚಾಮೃತ ಅಭಿಷೇಕ ಹಾಗೂ ರುದ್ರಾಭಿಷೇಕ, ನಂತರ ಭಕ್ತರಿಗೆ ದೇವರ ದರ್ಶನ ಪ್ರಾರಂಭವಾಗುತ್ತದೆ. ಮಧ್ಯಾಹ್ನ ಮಹಾ ಅನ್ನಸಂತರ್ಪಣೆ ನಡೆಯಲಿದೆ.

ಸಾಯಂಕಾಲ ಸಕಲ ಮಂಗಳ ವಾದ್ಯಗಳು ಹಾಗೂ ಜನಪದ ಕಲಾ ತಂಡಗಳು, ನೂರಾರು ಭಕ್ತರ ಸಮ್ಮುಖದಲ್ಲಿ ರಥೋತ್ಸವ ಜರುಗುವುದು ಎಂದು ದೇವಸ್ಥಾನ ಟ್ರಸ್ಟ್ ಕಮಿಟಿ ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದೆ.

**ಅಬ್ಬಿಗೇರಿಯಲ್ಲಿ ಸೆ. 3ರಿಂದ ರಂಭಾಪುರಿ ಜಗದ್ಗುರುಗಳ ದಸರಾ ಧರ್ಮ ಸಮ್ಮೇಳನ**

# ಶ್ರೀಪೀಠಕ್ಕೂ ಅಬ್ಬಿಗೇರಿಗೂ ಅವಿನಾಭಾವ ಸಂಬಂಧ

■ವಿಜಯಸಾಕ್ಷಿ ಸುದ್ದಿ, ಗದಗ



ರೋಣ ತಾಲೂಕಿನ ಅಬ್ಬಿಗೇರಿ ಗ್ರಾಮದ ಅನ್ನದಾನೇಶ್ವರ ಪ್ರೌಢಶಾಲೆಯ ಆವರಣದಲ್ಲಿ ಸೆ. 3ರಿಂದ 12ರವರೆಗೆ ಬಾಳೆಹೊನ್ನೂರು ಶ್ರೀಮದ್ ರಂಭಾಪುರಿ ಜಗದ್ಗುರುಗಳವರ ಶರನ್ನವರಾತ್ರಿ ದಸರಾ ಧರ್ಮ ಸಮ್ಮೇಳನವನ್ನು ಶ್ರದ್ಧಾಭಕ್ತಿಯಿಂದ ಜರುಗಿಲು ಸರ್ವ ಭಕ್ತಾಧಿಗಳು ಮುಂದಾಗಬೇಕೆಂದು ಸಿದ್ಧರಬೆಟ್ಟ-ಅಬ್ಬಿಗೇರಿಯ ಪೂಜ್ಯ ಷ.ಬ್ರ.ವೀರಭದ್ರ ಶಿವಾಚಾರ್ಯ ಸ್ವಾಮಿಗಳು ಹೇಳಿದರು.

ಅವರು ಶುಕ್ರವಾರ ಗದುಗಿನ ಜ.ಪಂಚಾಚಾರ್ಯ ಮಾಂಗಲ್ಯ ಮಂದಿರದಲ್ಲಿ ಜ.ಪಂಚಾಚಾರ್ಯ ಸೇವಾ ಸಂಘ, ಜ.ಪಂಚಾಚಾರ್ಯ ಮಾಂಗಲ್ಯ ಮಂದಿರ, ಜ.ಪಂಚಾಚಾರ್ಯ ಜ್ಞಾನಾಮೃತ ಟ್ರಸ್ಟ ಹಾಗೂ ಜ.ಪಂಚಪೀಠಾಭಿಮಾನಿಗಳು, ಸರ್ವ ಭಕ್ತವೃಂದದವರು ಏರ್ಪಡಿಸಿದ್ದ ರಂಭಾಪುರಿ ಜಗದ್ಗುರುಗಳವರ ದಸರಾ ಧರ್ಮ ಸಮ್ಮೇಳನದ ಪೂರ್ವಭಾವಿ ಸಭೆಯಲ್ಲಿ ಭಕ್ತರನ್ನು ಉದ್ದೇಶಿಸಿ ಮಾತನಾಡಿದರು.

ರೋಣ ತಾಲೂಕಿನ ಅಬ್ಬಿಗೇರಿ ಗ್ರಾಮವು ಧಾರ್ಮಿಕವಾಗಿ, ಶೈಕ್ಷಣಿಕವಾಗಿ ಶ್ರದ್ಧಾ-ಭಕ್ತಿಯನ್ನು ಹೊಂದಿರುವ ಜಾಗೃತ ತಾಣ. ಅಬ್ಬಿಗೇರಿ ಹಿರೇಮಠದ ಸಂಸ್ಕೃತ ಪಾಠಶಾಲೆಯು ನೂರು ವರ್ಷವನ್ನು ಪೂರೈಸಿ ಶತಮಾನೋತ್ಸವ ಕಂಡ ಶಾಲೆ. ಈ ಹಿಂದೆ ರಂಭಾಪುರಿ ಜಗದ್ಗುರುಗಳು ಇದೇ ಸಂಸ್ಕೃತ ಪಾಠಶಾಲೆಯಲ್ಲಿ ಅಧ್ಯಯನ ಮಾಡಿರುವದು ಇತಿಹಾಸ ಹೀಗಾಗಿ ರಂಭಾಪುರಿ ಪೀಠಕ್ಕೂ ಅಬ್ಬಿಗೇರಿಗೂ ಅವಿನಾಭಾವ ಸಂಬಂಧವಿದೆ ಎಂದರು.

ನರೇಗಲ್ಲ-ಸವದತ್ತಿ ಹಿರೇಮಠ ಪೂಜ್ಯ ಮಲ್ಲಿಕಾರ್ಜುನ ಶಿವಾಚಾರ್ಯ ಸ್ವಾಮಿಗಳು, ಅಡ್ನೂರಿನ ಪೂಜ್ಯ ಅಭಿನವ ಪಂಚಾಕ್ಷರ ಶಿವಾಚಾರ್ಯ ಸ್ವಾಮಿಗಳು, ಬನ್ನಿಕೊಪ್ಪ-ಮೈಸೂರಿನ ಜಪದಕಟ್ಟಿಮಠದ ಪೂಜ್ಯ ಡಾ.ಮುಮ್ಮಡಿ ಚಂದ್ರಶೇಖರ ಶಿವಾಚಾರ್ಯ ಸ್ವಾಮಿಗಳು, ತುಪ್ಪದ ಕುರಹಟ್ಟಿಯ ಭೂಸನೂರ ಸಂಸ್ಥಾನಮಠದ ಪೂಜ್ಯ ವಾಗೀಶ ಪಂಡಿತಾರಾಧ್ಯ ಶಿವಾಚಾರ್ಯ ಸ್ವಾಮಿಗಳು, ನರಗುಂದ ಪಂಚಗ್ರಹ ಗುಡ್ಡದ ಹಿರೇಮಠದ ಪೂಜ್ಯ ಅಭಿನವ ಸಿದ್ಧಲಿಂಗ ಶಿವಾಚಾರ್ಯ ಸ್ವಾಮಿಗಳು, ಹಿರೇವಡ್ಡಟ್ಟಿಯ ಹಿರೇಮಠದ ವೀರೇಶ್ವರ ಶಿವಾಚಾರ್ಯ ಸ್ವಾಮಿಗಳು, ಸೊರಟೂರಿನ ಪೂಜ್ಯ ಫಕ್ಕೀರೇಶ್ವರ ಸ್ವಾಮಿಗಳು ಮಾತನಾಡಿದರು.

ಸಭೆಯಲ್ಲಿ ದಸರಾ ಮಹೋತ್ಸವ ಕುರಿತು ಮಾಹಿತಿಯುಳ್ಳ ಕರಪತ್ರವನ್ನು ಬಿಡುಗಡೆ ಮಾಡಲಾಯಿತು. ಇದೇ ಸಂದರ್ಭದಲ್ಲಿ ಅ.ಭಾ.ವೀ.ಮಹಾಸಭಾದ ಗದಗ ಜಿಲ್ಲಾಧ್ಯಕ್ಷ ಶರಣಬಸಪ್ಪ ಗುಡಿಮನಿ ಅವರನ್ನು ಮಠಾಧೀಶರು ಸನ್ಮಾನಿಸಿ ಗೌರವಿಸಿದರು.

ವೇದಿಕೆಯ ಮೇಲೆ ಜ.ಪಂಚಾಚಾರ್ಯ ಮಾಂಗಲ್ಯ ಮಂದಿರದ ಕಾರ್ಯಾಧ್ಯಕ್ಷ ಅಜ್ಜಣ್ಣ ಮಲ್ಲಾಡದ, ಕಾರ್ಯದರ್ಶಿ ಚಂದ್ರು ಬಾಳಿಹಳ್ಳಿಮಠ, ಕೋಶಾಧ್ಯಕ್ಷ ರಾಜಣ್ಣ ಮಲ್ಲಾಡದ, ಜ.ಪಂಚಾಚಾರ್ಯ ಜ್ಞಾನಾಮೃತ ಟ್ರಸ್ಟನ ಕಾರ್ಯಾಧ್ಯಕ್ಷ ಮಲ್ಲಿಕಾರ್ಜುನ ಶಿಗ್ಲಿ, ಕಾರ್ಯದರ್ಶಿ ಶಿವಾನಂದಯ್ಯ ಹಿರೇಮಠ, ಅ.ಭಾ.ವೀ.ಮಹಾಸಭಾದ ಗದಗ ಜಿಲ್ಲಾಧ್ಯಕ್ಷ ಶರಣಬಸಪ್ಪ ಗುಡಿಮನಿ ಉಪಸ್ಥಿತರಿದ್ದರು.

ನಿವೃತ್ತ ಶಿಕ್ಷಕ ಎಂ.ಎಸ್. ಚೆನ್ನೂರ ಪ್ರಾಸ್ತಾವಿಕವಾಗಿ ಮಾತನಾಡಿದರು. ಚಂದ್ರು ಬಾಳಿಹಳ್ಳಿಮಠ ನಿರೂಪಿಸಿ ವಂದಿಸಿದರು. ಸಭೆಯಲ್ಲಿ ಜ.ಪಂಚಾಚಾರ್ಯ ಸೇವಾ ಸಂಘದ ಅಧ್ಯಕ್ಷ ಮಂಜುನಾಥ ಬೇಲೇರಿ, ವೀರೇಶ ಕೂಗು, ಭರಮಪ್ಪ ಹನಮನಾಳ ಶಿಕ್ಷಕ ಕಟಗಿ, ಅಬ್ಬಿಗೇರಿ ಮತ್ತು ಸುತ್ತಲಿನ ಗ್ರಾಮಸ್ಥರು ಸೇರಿದಂತೆ ಭಕ್ತಾಧಿಗಳು ಪಾಲ್ಗೊಂಡು ಸಲಹೆ-ಸೂಚನೆ ನೀಡಿದರು.

ಅಬ್ಬಿಗೇರಿಯ ಹಿರೇಮಠದ ಲಿಂಗೈಕ್ಯ ಷ.ಬ್ರ. ಸೋಮಶೇಖರ ಶಿವಾಚಾರ್ಯ ಸ್ವಾಮಿಗಳು ರಂಭಾಪುರಿ ಜಗದ್ಗುರುಗಳ ಶರನ್ನವರಾತ್ರಿ ದಸರಾ ಧರ್ಮ ಸಮ್ಮೇಳನವನ್ನು ಅಬ್ಬಿಗೇರಿಯಲ್ಲಿ ಜರುಗಿಸಬೇಕೆಂದು ಅಂದುಕೊಂಡಿದ್ದರು. ಅವರ ಸಂಕಲ್ಪ ಇದೀಗ ಸಾಕಾರಗೊಳ್ಳುತ್ತಿದೆ. ಅಬ್ಬಿಗೇರಿ, ರೋಣ, ಗಜೇಂದ್ರಗಡ ಸೇರಿದಂತೆ ಗದಗ ಜಿಲ್ಲೆಯ ಸಮಸ್ತ ಭಕ್ತಾಧಿಗಳು ಈ ದಸರಾ ಮಹೋತ್ಸವವನ್ನು ಅಬ್ಬಿಗೇರಿಯಲ್ಲಿ ಜರುಗಿಸಲು ಉತ್ಸುಕರಾಗಿ ಸಕಲ ಸಿದ್ಧತೆ ಮಾಡಿಕೊಂಡಿದ್ದಾರೆ. ನಾವೆಲ್ಲರೂ ಒಗ್ಗೂಡಿಕೊಂಡು ಯಶಸ್ವಿಗೊಳಿಸೋಣ ಎಂದು ಶ್ರೀಗಳು ನುಡಿದರು.

# ನೂತನ ಎಸ್‌ಡಿಎಮ್‌ಸಿ ರಚನೆ

■ವಿಜಯಸಾಕ್ಷಿ ಸುದ್ದಿ, ನರೇಗಲ್



ಸಮೀಪದ ಕುರುಡಗಿ ಗ್ರಾಮದ ಸರಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಈಚೆಗೆ ನೂತನ ಶಾಲಾಭಿವೃದ್ಧಿ ಮೇಲುಸ್ತುವಾರಿ ಸಮಿತಿಯನ್ನು ರಚಿಸಲಾಯಿತು.

ಅಧ್ಯಕ್ಷರಾಗಿ ಶಿಡ್ಲಪ್ಪ ಪೂಜಾರ, ಉಪಾಧ್ಯಕ್ಷರಾಗಿ ವಿದ್ಯಾ ಜಾಧವ, ಸದ್ಯಸ್ಯರಾಗಿ ಶಿವಯ್ಯ ಪೂಜಾರ, ಗಂಗಾಧರ ಅಂಗಡಿ, ಮಲ್ಲನಗೌಡ ಅಯ್ಯನಗೌಡ್ರ, ದೇವೇಂದ್ರ ಮಾದರ, ಜೀವನಸಾಬ ಚೋಪದಾರ, ರಾಜು ಜಾಧವ, ಶರಣಯ್ಯ ವಸ್ತ್ರದ, ಯಲ್ಲಪ್ಪ ತೊಂಡಿಹಾಳ, ಸುನಂದಾ ಸವಡಿ, ಲಕ್ಷ್ಮೀ ರಾಮಣ್ಣವರ, ವೀರವ್ವ ಕುರಿ, ಮಂಜುಳಾ ಹಿರೇಗೌಡ್ರ, ಬಸಮ್ಮ ಹೊಸಮನಿ, ನೀಲವ್ವ ದೊಡ್ಡಮನಿ, ಶಂಶಾದ್‌ಬೇಗಂ ನದಾಫ್, ಗಿರಿಜವ್ವ ಅಸುಂಡಿ ಅವಿರೋಧವಾಗಿ ಆಯ್ಕೆಯಾದರು.

18 ಜನ ಪಾಲಕ ಪ್ರತಿನಿಧಿಗಳಾಗಿ, 3 ಜನ ಪದನಿಮಿತ್ತ ಸದಸ್ಯರಾಗಿ, 3 ಜನ ನಾಮ ನಿರ್ದೇಶಕ ಸದಸ್ಯರಾಗಿ ಸರ್ವಸಮ್ಮತದಿಂದ ಆಯ್ಕೆ ಮಾಡಲಾಗಿದೆ ಎಂದು ಪ್ರಧಾನ ಗುರುಮಾತೆ ರೇಣುಕಾ ಗಡಗಿ ತಿಳಿಸಿದರು.

ಈ ಸಂದರ್ಭದಲ್ಲಿ ಬಿಆರ್‌ಪಿ ಈರಣ್ಣ ಎಸ್.ಮಾದರ, ಅಬ್ಬಿಗೇರಿ ಸಿಆರ್‌ಪಿ ಎಸ್.ಆರ್. ಮೂಲಿಮನಿ, ಗ್ರಾ.ಪಂ ಅಧ್ಯಕ್ಷ ವೀರಪ್ಪ ರಾಮಣ್ಣವರ, ಪಿಡಿಒ ಶಿಲ್ಪಾ ಕವಲೂರ, ಸದಸ್ಯರಾದ ಶೌಕತ್‌ಅಲಿ ನದಾಫ್, ಪವಿತ್ರಾ ಕುರಿ, ಜಯಲಕ್ಷ್ಮೀ ವಾಲ್ಮೀಕಿ, ಗಂಗವ್ವ ಪೂಜಾರ, ಗ್ರಾಮದ ಹಿರಿಯರಾದ ಮಲ್ಲಯ್ಯ ವಸ್ತ್ರದ, ವೀರಣ್ಣ ಸವಡಿ, ಯಲ್ಲಪ್ಪ ಕುರಿಯವರ, ಶಿವಪ್ಪ ತೊಂಡಿಹಾಳ, ವಸಂತ ರಾಮಣ್ಣವರ, ರಮೇಶ ಜಾಧವ, ವೀರಪ್ಪ ಕಾಡರ, ಮಹಬೂಬ ಮುಳಗುಂದ ಸೇರಿದಂತೆ ಶಿಕ್ಷಕ ವೃಂದ ಉಪಸ್ಥಿತರಿದ್ದರು. ಶಿಕ್ಷಕ ಓ.ಪೂರ್ಣಯ್ಯ ನಿರೂಪಿಸಿ ವಂದಿಸಿದರು.

# ಶ್ರೀ ವೀರಭದ್ರೇಶ್ವರ ಜಾತ್ರೆ ಸೆ. 3ಕ್ಕೆ

■ವಿಜಯಸಾಕ್ಷಿ ಸುದ್ದಿ, ನರೇಗಲ್

ಪಟ್ಟಣದ ಪ್ರಸಿದ್ಧ ಶ್ರೀ ವೀರಭದ್ರೇಶ್ವರ ದೇವಸ್ಥಾನದ ಜಾತ್ರಾ ಮಹೋತ್ಸವವು ಸೆ.3ರಂದು ನಡೆಯಲಿದೆ ಎಂದು ಜಾತ್ರಾ ಕಮಿಟಿಯ ಪ್ರಕಟಣೆ ತಿಳಿಸಿದೆ.

ಸೆ.3ರಂದು ಬೆಳಗ್ಗೆ ಅಗ್ನಿಕುಂಡ ಹಾಯುವ ಕಾರ್ಯಕ್ರಮ ಜರುಗುವುದು. ಪುರವಂತರೊಂದಿಗೆ ಗುಗ್ಗಳ ಕಾರ್ಯಕ್ರಮವು ಸಕಲ ವಾದ್ಯಗಳೊಂದಿಗೆ ವೀರಣ್ಣನ ಪಾದಗಟ್ಟೆಯವರೆಗೆ ನಡೆಯಲಿದೆ. ಮಧ್ಯಾಹ್ನ 12.30ಕ್ಕೆ ಅಭಿಜಿನ್ ಮುಹೂರ್ತದಲ್ಲಿ ಸಾಮೂಹಿಕ ವಿವಾಹ ಜರುಗಲಿದ್ದು, ಈ ಸಮಾರಂಭದಲ್ಲಿ ಹಾಲಕೆರೆಯ ಮುಪ್ಪಿನ ಬಸವಲಿಂಗ ಸ್ವಾಮೀಜಿಗಳು ದಿವ್ಯ ಸಾನ್ನಿಧ್ಯ ವಹಿಸಿವರು. ಹಿರೇಮಠದ ಮಲ್ಲಿಕಾರ್ಜುನ ಶಿವಾಚಾರ್ಯರು ಅಧ್ಯಕ್ಷತೆ ವಹಿಸುವರು. ನಿಡಗುಂದಿಕೊಪ್ಪದ ಶಾಖಾ ಶಿವಯೋಗ ಮಂದಿರದ ಅಭಿನವ ಚನ್ನಬಸವ ಸ್ವಾಮೀಜಿ ಹಾಗೂ ದರಗಾದ ಹಜರತ್ ಮಂಜೂರ ಹುಸೇನ್ ಶ್ಯಾವಲಿಯವರು ಸಾನ್ನಿಧ್ಯ ವಹಿಸಲಿದ್ದಾರೆ.

ಶಾಸಕ ಜಿ.ಎಸ್. ಪಾಟೀಲ ಮತ್ತು ಮಾಜಿ ಶಾಸಕ ಕಳಕಪ್ಪ ಬಂಡಿ ಮುಖ್ಯ ಅತಿಥಿಗಳಾಗಿ ಪಾಲ್ಗೊಳ್ಳಲಿದ್ದಾರೆ. ಸಂಜೆ 5ಕ್ಕೆ ಮಹಾ ರಥೋತ್ಸವ ಜರುಗಲಿದೆ. ಸೆ.4ರಂದು ಸಂಜೆ 5ಕ್ಕೆ ಲಘು ರಥೋತ್ಸವವು ಜರುಗಲಿದೆ ಎಂದು ದೇವಸ್ಥಾನದ ಪ್ರಕಟಣೆ ತಿಳಿಸಿದೆ.

# ಬಿಜೆಪಿ ಸದಸ್ಯತಾ ಅಭಿಯಾನ ಕಾರ್ಯಾಗಾರ

■ವಿಜಯಸಾಕ್ಷಿ ಸುದ್ದಿ, ಗದಗ




ಭಾರತೀಯ ಜನತಾ ಪಾರ್ಟಿ ಗದಗ ಜಿಲ್ಲಾ ಕಾರ್ಯಾಲಯದಲ್ಲಿ ಗದಗ ವಿಧಾನಸಭಾ ಕ್ಷೇತ್ರದ ಸದಸ್ಯತಾ ಅಭಿಯಾನ ಕಾರ್ಯಾಗಾರ ಜರುಗಿತು.

ಮುಖ್ಯ ಅತಿಥಿಗಳಾಗಿ ಆಗಮಿಸಿದ್ದ ಪಕ್ಷದ ಹಿರಿಯರಾದ ಎಂ.ಎಸ್. ಕರೀಗೌಡ್ರ ಮಾತನಾಡಿ, ಬಿಜೆಪಿ ಒಂದು ಪಕ್ಷವಾಗಿ ಸಂಘಟನೆಯನ್ನು ಬಲಪಡಿಸಲು ಅನೇಕ ಆಂತರಿಕ ಪ್ರಜಾಸತ್ತಾತ್ಮಕ ಪ್ರಕ್ರಿಯೆಗಳನ್ನು ನಡೆಸುತ್ತಿರುತ್ತದೆ. ಸದಸ್ಯತಾ ಅಭಿಯಾನ-2024ನ್ನು ಯಶಸ್ವಿಗೊಳಿಸಿ ಪ್ರತಿ ಮಂಡಲದಿಂದ ಹೆಚ್ಚು ಹೆಚ್ಚು ಸದಸ್ಯರನ್ನಾಗಿಸಿ ಪ್ರಧಾನಿ ನರೇಂದ್ರ ಮೋದಿಯವರ ಕೈ ಬಲಪಡಿಸೋಣ ಎಂದರು.

ಬಿಜೆಪಿ ಜಿಲ್ಲಾಧ್ಯಕ್ಷ ತೋಟಪ್ಪ(ರಾಜು) ಕುರುಡಗಿ ಮಾತನಾಡಿ, ಕಳೆದ 10 ವರ್ಷಗಳಲ್ಲಿ ದೇಶದಾದ್ಯಂತ ಪಕ್ಷದ ಚಟುವಟಿಕೆಯಲ್ಲಿ ಬೆಳವಣಿಗೆಯಾಗಿದೆ. ಸದಸ್ಯತ್ವ ದೃಷ್ಟಿಯಿಂದ ಬಿಜೆಪಿ ವಿಶ್ವದ ಅತಿದೊಡ್ಡ ರಾಜಕೀಯ ಪಕ್ಷವಾಗಿದೆ. ಪಕ್ಷದ ಬೂತ್ ಮಟ್ಟದ ಸಮಿತಿಗಳು ಬಹುಪಾಲು 10.5 ಲಕ್ಷ ಬೂತ್‌ಗಳಲ್ಲಿ ಕಾರ್ಯನಿರ್ವಹಿಸುತ್ತಿವೆ. ಸಂಸದರಿಂದ ಪಂಚಾಯತ್ ಸದಸ್ಯರವರೆಗೆ ಹೆಚ್ಚಿನ ಸಂಖ್ಯೆಯ ಚುನಾಯಿತ ಪ್ರತಿನಿಧಿಗಳನ್ನು ನಾವು ಹೊಂದಿದ್ದೇವೆ. ಪ್ರಧಾನಮಂತ್ರಿ ನರೇಂದ್ರ ಮೋದಿಜಿ ಅವರು ನೀಡಿದ 'ಸೇವಾ ಹಿ ಸಂಘಟನೆ' ಮಂತ್ರದೊಂದಿಗೆ ಪಕ್ಷದ ಕಾರ್ಯಕರ್ತರೊಂದಿಗೆ ತಮ್ಮ ರಾಜಕೀಯ ಮತ್ತು ಸಾಮಾಜಿ ಕರ್ತವ್ಯಗಳನ್ನು ಸಮಾನ ಬದ್ಧತೆಯಿಂದ ನಿರ್ವಹಿಸುತ್ತಿದ್ದಾರೆ. ಎಲ್ಲ ಕಾರ್ಯಕರ್ತರು ಅಭಿಯಾನವನ್ನು ಯಶಸ್ವಿಗೊಳಸಬೇಕೆಂದು ತಿಳಿಸಿದರು.

ಈ ಸಂದರ್ಭದಲ್ಲಿ ಗದಗ ನಗರ ಮಂಡಲ ಅಧ್ಯಕ್ಷ ಅನಿಲ ಅಬ್ಬಿಗೇರಿ, ಪಕ್ಷದ ಹಿರಿಯರಾದ ಜಗನ್ನಾಥಸಾ ಭಾಂಡಗೆ, ಪ್ರಮುಖರಾದ ರವಿ ದಂಡಿನ, ಭದ್ರೇಶ ಕುಸ್ಲಾಪೂರ, ಬೂದಪ್ಪ ಹಳ್ಳಿ, ಗಂಗಾಧರ ಹಬೀಬ, ಪ್ರಕೋಷ್ಠಗಳ ಸಂಯೋಜಕರಾದ ಶಶಿಧರ ದಿಂಡೂರ, ಯುವ ಮೋರ್ಚಾ ಅಧ್ಯಕ್ಷ ಸಂತೋಷ ಅಕ್ಕಿ, ರವಿ ವಗ್ಗನವರ ಸೇರಿದಂತೆ ಪಕ್ಷದ ಬೂತ್ ಅಧ್ಯಕ್ಷರು, ಮುಖಂಡರು, ಚುನಾಯಿತ ಪ್ರತಿನಿಧಿಗಳು, ಕಾರ್ಯಕರ್ತರು ಉಪಸ್ಥಿತರಿದ್ದರು.

# ರಾಜ್ಯ ಮಟ್ಟದ ಹೊನಲು ಬೆಳಕಿನ ಮುಕ್ತ ಮ್ಯಾಟ್ ಕಬಡ್ಡಿ ಪಂದ್ಯಾವಳಿ

■ವಿಜಯಸಾಕ್ಷಿ ಸುದ್ದಿ, ಗದಗ

ರೋಣ ತಾಲೂಕಿನ ಕುರುಡಗಿ ಗ್ರಾಮದ ಶ್ರೀ ವರವೀರಭದ್ರೇಶ್ವರ ಜಾತ್ರಾ ಮಹೋತ್ಸವದ ಅಂಗವಾಗಿ ಶ್ರೀ ವರವೀರೇಶ್ವರ ಯುವಕ ಮಂಡಳ ಕುರುಡಗಿ ಇವರ ವತಿಯಿಂದ ಸೆಪ್ಟೆಂಬರ್ 2ರಂದು ಸಾಯಂಕಾಲ 7 ಗಂಟೆಗೆ ರಾಜ್ಯ ಮಟ್ಟದ ಹೊನಲು ಬೆಳಕಿನ ಮುಕ್ತ ಮ್ಯಾಟ್ ಕಬಡ್ಡಿ ಪಂದ್ಯಾವಳಿಗಳನ್ನು ಏರ್ಪಡಿಸಲಾಗಿದೆ.

ಸದರಿ ಪಂದ್ಯಾವಳಿಗಳಲ್ಲಿ ವಿಜೇತ ತಂಡಗಳಿಗೆ ಪ್ರಥಮ ಬಹುಮಾನ ರೂ. 25,000 ಹಾಗೂ 4 ಪೂಟಿನ ಟ್ರೋಫಿ, ದ್ವಿತೀಯ ಬಹುಮಾನ ರೂ. 20,000 ಹಾಗೂ 3.5 ಪೂಟಿನ ಟ್ರೋಫಿ, ತೃತೀಯ ಬಹುಮಾನ ರೂ. 15,000 ಹಾಗೂ 3 ಫೂಟಿನ ಟ್ರೋಫಿ, ಚತುರ್ಥ ಬಹುಮಾನ ರೂ. 10,000 ಹಾಗೂ 3 ಫೂಟಿನ ಟ್ರೋಫಿ, ಉತ್ತಮ ತಂಡಕ್ಕೆ ರೂ. 5000ರೂಗಳನ್ನು ನೀಡಲಾಗುವುದು.

ವೈಯಕ್ತಿಕ ಬಹುಮಾನಗಳಿದ್ದು, ಆಸಕ್ತ ಕ್ರೀಡಾಪಟುಗಳು ಭಾಗವಹಿಸಬೇಕೆಂದು ಸಂಘದ ಅಧ್ಯಕ್ಷರಾದ ವೀರೇಶ ಎಸ್.ಕುಲಕರ್ಣಿ (ಮೊ: 8971141043) ಪತ್ರಿಕಾ ಪ್ರಕಟಣೆಯ ಮೂಲಕ ವಿನಂತಿಸಿದ್ದಾರೆ. ಹೆಚ್ಚಿನ ಮಾಹಿತಿಗಾಗಿ ವಿನೋದ ಅಸುಂಡಿ-8431667617, ಗದಿಗೆಪ್ಪ ರಾಮಣ್ಣವರ-9591583912 ಇವರನ್ನು ಸಂಪರ್ಕಿಸಲು ಕೋರಲಾಗಿದೆ.

# ಇಂದಿನ ನೀರು ಪೂರೈಕೆ ವಿವರ

■ವಿಜಯಸಾಕ್ಷಿ ಸುದ್ದಿ, ಗದಗ

ಗದಗ-ಬೆಟಗೇರಿ ಅವಳಿ ನಗರದಲ್ಲಿ ಆಗಸ್ಟ್ 31ರಂದು ಈ ಕೆಳಗಿನ ಸ್ಥಳಗಳಿಗೆ ನೀರು ಪೂರೈಕೆ ಮಾಡಲಾಗುವುದು ಎಂದು ನಗರಸಭೆ ಅಧಿಕಾರಿಗಳು ತಿಳಿಸಿದ್ದಾರೆ.

ಸ್ಥಳಗಳ ವಿವರ : ವಾರ್ಡ್ ನಂ. 20, 21, 23 ಹಾರೋಗೇರಿ ಭಾಗ-1,2, ಕಗನಳ್ಳಿ, ಸೋಮನಗೌಡ್ರ, ಹೊನ್ನೆತ್ತಮ್ಮ ಗುಡಿ ಭಾಗ-1,2, ವಿಭೂತಿ ಓಣಿ, ಹನುಮಾನ ಗರಡಿ, ದ್ರೌಪತಿ ಬಾಯಿ, ದ್ಯಾಮವ್ವನ ಕಟ್ಟಿ, ಉಸುಕಿನ ಕಟ್ಟಿ, ಜಂತ್ಲಿಯವರ ಹಳೇ ಲೈನ್, ಕಾಳಮ್ಮ ಗುಡಿ ಲೈನ್, ಕುಂಬಾರ ಓಣಿ, ಹೆಬಸೂರ ಲೈನ್, ಕಮತರ ಪ್ಲಾಟ್.

ವಾರ್ಡ್ ನಂ. 26 ಹಳೆ ಬಸ್ ಸ್ಟ್ಯಾಂಡ್ ಲೈನ್, ಸೋಡಾದಂಗಡಿ ಲೈನ್, ಜನತಾ ಕಿರಾಣಿ ಲೈನ್, ಸಂಗಮ ಬಜಾರ ಲೈನ್, ಬೇವಿನಕಟ್ಟಿ ಭಾಗ -1,2, ಬೂಸ್ತ್ ಲೈನ್, ದನದ ದವಾಖಾನೆ ಲೈನ್. ವಾರ್ಡ್ ನಂ. ವಾರ್ಡ್ 12 ಗಾಣಿಗೇರ ಭವನ, ನಾಗಪ್ಪನ ಕಟ್ಟೆ, ರಿಂಗ್ ರೋಡ್, ನಿಸರ್ಗ ಬಡಾವಣೆ, ಕಾಶಿ ವಿಶ್ವನಾಥ ಗುಡಿ ಲೈನ್, ಉಳಿದ ಕೆಲವು ಭಾಗಗಳು.

ವಾರ್ಡ್ ನಂ. 27, 29, 30 ಹನುಮಂತ ದೇವರ ಗುಡಿ ಲೈನ್, ಕಣವಿ ಲೈನ್, ದುರ್ಗಮ್ಮ ಗುಡಿ ಲೈನ್, ವಿ ಆರ್ ಎಲ್ ಆಫೀಸ್ ಲೈನ್, ಕಾಶಿ ವಿಶ್ವನಾಥ ನಗರ, ಪಂಚಾಕ್ಷರಿ ನಗರ 3 ಮತ್ತು 4ನೇ ಕ್ರಾಸ್, ಸಂಕಣ್ಣವರ ಲೇಔಟ್, ಕೇಶವ ನಗರ, ರೋಣದವರ ಲೈನ್. ವಾರ್ಡ್ ನಂ. 1 ಎಸ್ ಎಂ ಕೃಷ್ಣ ನಗರದ ಎಲ್ಲಾ ಭಾಗಗಳು.

ತುಂಗಭದ್ರಾ ನದಿಯಿಂದ ಪೂರೈಕೆ ಮಾಡಿದ ನೀರನ್ನು ಸಂಗ್ರಹಣೆ ಮಾಡಿದ ನಂತರ ಹೊಸ ನೀರು ಸಂಗ್ರಹವಾಗಿರುವುದರಿಂದ ಕಡ್ಡಾಯವಾಗಿ ಕಾಯಿಸಿ ಆರಿಸಿ ಕುಡಿಯಲು ಉಪಯೋಗಿಸತಕ್ಕದ್ದು ಎಂದು ಗದಗ-ಬೆಟಗೇರಿ ನಗರಸಭೆ ಪೌರಾಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.



ರೋಣ ತಾಲೂಕಿನ ಅಬ್ಬಿಗೇರಿ ಗ್ರಾಮದಲ್ಲಿ ನಡೆಯಲಿರುವ ರಂಭಾಪುರಿ ಜಗದ್ಗುರುಗಳವರ ದಸರಾ ಧರ್ಮ ಸಮ್ಮೇಳನದ ಶ್ರೀಮದ್ ರಂಭಾಪುರಿ ಜಗದ್ಗುರುಗಳ ಧರ್ಮಪ್ರಸಾರದ ರಥಕ್ಕೆ ಸಿದ್ಧರಬೆಟ್ಟ-ಅಬ್ಬಿಗೇರಿಯ ಪೂಜ್ಯ ಷ.ಬ್ರ. ವೀರಭದ್ರ ಶಿವಾಚಾರ್ಯ ಸ್ವಾಮಿಗಳು ನರೇಗಲ್ಲ, ಅಡ್ನೂರ, ಬನ್ನಿಕೊಪ್ಪ, ತುಪ್ಪದಕುರಹಟ್ಟಿ ಸ್ವಾಮಿಗಳು ಗದುಗಿನ ಜ.ಪಂಚಾಚಾರ್ಯ ಮಾಂಗಲ್ಯ ಮಂದಿರದಲ್ಲಿ ಶುಕ್ರವಾರ ಚಾಲನೆ ನೀಡಿದರು.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka